ಸಂಪುಟ : 10 ಸಂಚಿಕೆ: 162 ಪುಟ : 4+2 ಬೆಲೆ: 3.00 ಶನಿವಾರ ಆಗಸ್ಟ್ 02 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶಿರೇಹನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 10 Issue : 162 Pages : 4+2 Price : 3.00 Saturday August 02 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಶ್ರೀ ರಾಘವೇಂದ್ರ ಸ್ವಾಮಿಗಳ ಸನ್ನಿಧಿಯಲ್ಲಿ ಆ. 10ರಿಂದ ಆರಾಧನಾ ಮಹೋತ್ಸವ

■ ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಕರಿಯಮ್ಮನಕಲ್ಲು ಬಡಾವಣೆಯಲ್ಲಿರುವ ಶ್ರೀಗುರು ರಾಘವೇಂದ್ರಸ್ವಾಮಿಗಳ ಬೃಂದಾವನ ಸನ್ನಿಧಿಯಲ್ಲಿ ಆ. 10ರಿಂದ 12ರವರೆಗೆ ಶ್ರೀಗುರು ರಾಘವೇಂದ್ರ ಸ್ವಾಮಿಗಳ 354ನೇ ಆರಾಧನಾ ಮಹೋತ್ಸವದ ನಿಮಿತ್ತ ವಿವಿಧ ಕಾರ್ಯಕ್ರಮಗಳು ಜರುಗಲಿವೆ.

ಇಲ್ಲಿನ ಗುರು ರಾಘವೇಂದ್ರ ಶ್ರೀಗಳ ಬೃಂದಾವನ ಸನ್ನಿಧಿಯಲ್ಲಿ 22ನೇ ಆರಾಧನಾ ಮಹೋತ್ಸವ ಜರುಗುತ್ತಿದ್ದು, ಪ್ರತಿದಿನ ಬೆಳಿಗ್ಗೆ 5ರಿಂದ 7ರವರೆಗೆ ಗುರುಗಳ ಗುರುಪದಹಾರ ಮತ್ತು ಸ್ತವನ ಕಾರ್ಯಕ್ರಮ, ಬೆಳಿಗ್ಗೆ 7ರಿಂದ ಶ್ರೀಹರಿವಾಯು ಹಾಗೂ ರಾಘವೇಂದ್ರ ಶ್ರೀಗಳ ಸ್ತುತಿ ಅಷ್ಟೋತ್ತರ, ಪಂಚಾಮೃತ ಅಭಿಷೇಕ, ಅಲಂಕಾರ, ಮಹಾಪೂಜೆ, ವಿಶೇಷ ಸೇವೆಗಳು ಜರುಗುವವು.

9ರಿಂದ 10 ಗಂಟೆಯವರೆಗೆ ಶ್ರೀಹರಿಪ್ರಿಯ ಭಜನಾ ಮಂಡಳಿಯಿಂದ ಭಜನೆ, 10ರಿಂದ 12ರವರೆಗೆ ಶ್ರೀಹರೇ ಶ್ರೀನಿವಾಸ ಭಜನಾ ಮಂಡಳಿಯಿಂದ ಭಜನಾ ಕಾರ್ಯಕ್ರಮ ಜರುಗುವವು. ಆ. 10ರಂದು ಬೆಳಿಗ್ಗೆ 11 ಗಂಟೆಗೆ ಪೂರ್ವಾರಾಧನೆಯ ನಿಮಿತ್ತ ಪಂ. ವರದರಾಜಾಚಾರ್ಯ ಜಾಲಿಹಾಳ ಇವರಿಂದ ರಾಯರು ಹಾಗೂ ಅವರ ಗ್ರಂಥಗಳ ಕುರಿತು ಪ್ರವಚನ, ಆ. 11ರಂದು ಬೆಳಿಗ್ಗೆ 11 ಗಂಟೆಗೆ ಮಧ್ಯಾರಾಧನೆಯ ನಿಮಿತ್ತ ಪಂ. ಪಾಂಡುರಂಗಾಚಾರ್ಯ ಜಾಲಿಹಾಳ ಇವರಿಂದ ಪ್ರವಚನ ಕಾರ್ಯಕ್ರಮ, ಸಂಜೆ 6 ಗಂಟೆಗೆ ಶ್ರೀಗುರು ರಾಘವೇಂದ್ರ ಸೇವಾ ಸಮಿತಿ ಹಾಗೂ ಶ್ರೀಗುರು ರಾಘವೇಂದ್ರ ಕಲಾಬಳಗ ಇವರಿಂದ ಧೀರ ಶ್ರೀ ರಾಘವೇಂದ್ರ ವೃತಿವರ ಸಂಗೀತರೂಪಕ ಜರುಗುವುದು.

▸▸ 3ನೇ ಪುಟಕ್ಕೆ

### ವ್ಯಸನ ಮುಕ್ತ ದಿನಾಚರಣೆ ಕಾರ್ಯಕ್ರಮದಲ್ಲಿ ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ್ ಕರೆ

# ವ್ಯಸನ ಮುಕ್ತ ಸಮಾಜ ನಿರ್ಮಾಣಕ್ಕೆ ಕೈಜೋಡಿಸಿ



> ಕಾಲೇಜು ವಿದ್ಯಾರ್ಥಿಗಳು ಸೇರಿದಂತೆ ಯುವಜನರು ಮದ್ಯಪಾನ, ತಂಬಾಕು, ಗುಟ್ಕಾ, ಸಿಗರೇಟು ಸೇವನೆ ಮುಂತಾದ ದುಶ್ಚಟಗಳ ದಾಸರಾಗದಂತೆ ತಮ್ಮ ಮನಸ್ಸಿನ ಮೇಲೆ ನಿಯಂತ್ರಣ ಸಾಧಿಸಬೇಕು. ಇತ್ತೀಚಿನ ದಿನಗಳಲ್ಲಿ ಶಾಲಾ-ಕಾಲೇಜು ವಿದ್ಯಾರ್ಥಿಗಳು ಮೊಬೈಲ್‌ನ ಅತಿಯಾದ ಬಳಕೆಯಿಂದ ಮೊಬೈಲ್ ವ್ಯಸನಿಗಳಾಗುತ್ತಿದ್ದಾರೆ. ವ್ಯಸನಗಳ ಬೆನ್ನಟ್ಟಿ ಹೋಗದಂತೆ ದೃಢವಾದ ಆತ್ಮವಿಶ್ವಾಸ ಹೊಂದುವುದು ಮುಖ್ಯವಾಗಿದೆ.
>
> **- ಸಿ.ಎನ್. ಶ್ರೀಧರ್.**
> ಜಿಲ್ಲಾಧಿಕಾರಿಗಳು, ಗದಗ.

**ಗಮನ ಸೆಳೆದ ಜಾಗೃತಿ ಗೀತೆ, ಕಿರುನಾಟಕ**

ರೋಣದ ಜೀವನ ಬೆಳಕು ಕಲಾ ತಂಡದ ರಾಜಶೇಖರ ಹಿರೇಮಠ ಹಾಗೂ ತಂಡದವರು ಪ್ರಸ್ತುತಪಡಿಸಿದ ದೀಪ ನೃತ್ಯ ಹಾಗೂ ಮಾದಕ ವಸ್ತು ವಿರೋಧಿ ಜಾಗೃತಿ ಗೀತೆಗಳು ಶ್ರೋತೃಗಳ ಗಮನ ಸೆಳೆದವು. ಗದಗ-ಬೆಟಗೇರಿಯ ಎಸ್‌ಎಸ್‌ಕೆ ಜಗದಂಬಾ ಆಂಗ್ಲ ಮಾಧ್ಯಮ ಶಾಲೆಯ ವಿದ್ಯಾರ್ಥಿಗಳು ವ್ಯಸನಮುಕ್ತ ದಿನಾಚರಣೆಯ ನಿಮಿತ್ತ ಕಿರುನಾಟಕ ಪ್ರಸುತಪಡಿಸಿ ಮಾದಕ ವಸ್ತುಗಳ ದುಷ್ಪರಿಣಾಮಗಳ ಕುರಿತು ಅರಿವು ಮೂಡಿಸಿದರು.

■ ವಿಜಯಸಾಕ್ಷಿ ಸುದ್ದಿ, ಗದಗ

ದೇಹ ಮತ್ತು ಮನಸ್ಸಿನ ಮೇಲೆ ದುಷ್ಪರಿಣಾಮ ಬೀರುವ ಯಾವುದೇ ಚಟವನ್ನು ವ್ಯಸನ ಎಂದು ಕರೆಯುತ್ತಾರೆ. ವ್ಯಕ್ತಿ ಜೀವನದಲ್ಲಿ ನಿಶ್ಚಿತ ಗುರಿ ಸಾಧಿಸಬೇಕಾದರೆ ಯಾವುದೇ ದುಶ್ಚಟಗಳಿಗೆ ಬಲಿಯಾಗಬಾರದು. ಇಂದಿನ ಯುವಜನತೆ ಯಾವುದೇ ದುಶ್ಚಟಗಳಿಗೆ ಬಲಿಯಾಗದೇ ವ್ಯಸನಮುಕ್ತ ಸಮಾಜ ನಿರ್ಮಿಸಲು ಕೈಜೋಡಿಸಬೇಕು ಎಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಕರೆ ನೀಡಿದರು.

ನಗರದ ಜಿಲ್ಲಾಡಳಿತ ಭವನದ ಆಡಿಟೋರಿಯಂ ಹಾಲ್‌ನಲ್ಲಿ ಶುಕ್ರವಾರ ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಕರ್ನಾಟಕ ರಾಜ್ಯ ಮದ್ಯಪಾನ ಸಂಯಮ ಮಂಡಳಿ ಬೆಂಗಳೂರು, ಗದಗ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಇವರುಗಳ ಸಂಯುಕ್ತ ಆಶ್ರಯದಲ್ಲಿ ಜರುಗಿದ ಡಾ.ಮಹಾಂತ ಶಿವಯೋಗಿಗಳ ಜಯಂತಿ ಪ್ರಯುಕ್ತ ಹಮ್ಮಿಕೊಂಡಿದ್ದ ವ್ಯಸನಮುಕ್ತ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಅಪರ ಜಿಲ್ಲಾಧಿಕಾರಿ ಡಾ. ದುರುಗೇಶ ಮಾತನಾಡಿ, ಮಾದಕ ವಸ್ತು ಬಳಕೆ ಮತ್ತು ಸಾಗಾಣಿಕೆ ಶಿಕ್ಷಾರ್ಹ ಅಪರಾಧವಾಗಿದೆ. ಸಾಂಕ್ರಾಮಿಕ ರೋಗಗಳಿಗೆ ಪ್ರೇರಕ ಎಚ್.ಐ.ವಿ. ಏಡ್ಸ್ ರೋಗಗಳಿಗೆ ವಾಹಕ, ಶಾಲಾ ಕಾಲೇಜುಗಳ ಗೈರು ಹಾಜರಿಗೆ ಇಂಬುಕೊಡುವ, ಉದ್ಯೋಗ, ಆದಾಯ ಹಾಳು ಮಾಡಲು, ವಿಧ್ವಂಸಕ ಅಪರಾಧ, ಭ್ರಷ್ಟಾಚಾರ, ಕಪ್ಪು ಹಣ, ಭಯೋತ್ಪಾದನೆಗಳಿಗೆ ಪ್ರಚೋದಕವಾಗಿವೆ ಎಂದು ತಿಳಿಸಿ, ಮಾದಕವಸ್ತು ವಿರೋಧಿ ಪ್ರತಿಜ್ಞಾ ವಿಧಿಯನ್ನು ಬೋಧಿಸಿದರು.

ಗದಗ ಕೆ.ಎಚ್. ಪಾಟೀಲ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ಸಹಾಯಕ ಪ್ರಾಧ್ಯಾಪಕ ಡಾ.ಅರವಿಂದ ಕರಿನಾಗಣ್ಣವರ ಪಿಪಿಟಿ ಮೂಲಕ ವಿದ್ಯಾರ್ಥಿಗಳಿಗೆ ಮಾದಕ ವಸ್ತುಗಳ ಸೇವನೆಯಿಂದಾಗುವ ದುಷ್ಪರಿಣಾಮಗಳನ್ನು ತಿಳಿಸಿದರು. ಚಿಕಿತ್ಸೆಗಿಂತ ತಡೆಗಟ್ಟುವಿಕೆ ಉತ್ತಮವಾಗಿದ್ದು, ಒಂದು ಸಿಗರೇಟ್ ಸೇರುವುದರಿಂದ ಜೀವನದ ಅತ್ಯಮೂಲ್ಯ 11 ನಿಮಿಷಗಳನ್ನು ಕಳೆದುಕೊಳ್ಳುತ್ತೆ ಹಾಗೂ ಸಿಗರೇಟ್‌ನಲ್ಲಿ 6000ಕ್ಕೂ ಹೆಚ್ಚು ಹಾನಿಕಾರಕ ರಾಸಾಯನಿಕಗಳಿರುತ್ತವೆ. ವಿದ್ಯಾರ್ಥಿಗಳು ಕುತೂಹಲದಿಂದ ಮಾದಕ ವ್ಯಸನ ಪ್ರಾರಂಭಿಸಿ ಅದರಿಂದ ಹೊರಬರದಂತೆ ಅದಕ್ಕೆ ದಾಸರಾಗುತ್ತಾರೆ.

▸▸ 3ನೇ ಪುಟಕ್ಕೆ

### ದೆಹಲಿ ನಾಯಕರ ಗಮನ ಸೆಳೆದ ರಾಷ್ಟ್ರೀಯ ಯುವ ಕಾಂಗ್ರೆಸ್ ಕಾರ್ಯದರ್ಶಿ

# ವಿವೇಕ್ ಯಾವಗಲ್ ಪುನರಾಯ್ಕೆ

■ ವಿಜಯಸಾಕ್ಷಿ ಸುದ್ದಿ, ಗದಗ




ರಾಷ್ಟ್ರೀಯ ಯುವ ಕಾಂಗ್ರೆಸ್ ಕಾರ್ಯದರ್ಶಿಯನ್ನಾಗಿ ವಿವೇಕ್ ಯಾವಗಲ್ ಅವರನ್ನು ಕಾಂಗ್ರೆಸ್ ಹೈಕಮಾಂಡ್ ಪುನರಾಯ್ಕೆ ಮಾಡಿದೆ.

ಕಳೆದ ವರ್ಷ ನಡೆದ ಪಂಚರಾಜ್ಯಗಳ ಚುನಾವಣೆಯಲ್ಲಿ ತೆಲಂಗಾಣದಲ್ಲಿ ಕಾಂಗ್ರೆಸ್ ಪಕ್ಷ ಗೆಲುವು ಸಾಧಿಸಿದ್ದು, ಭಾರತೀಯ ಯುವ ಕಾಂಗ್ರೆಸ್ ಕಾರ್ಯದರ್ಶಿ ವಿವೇಕ್ ಯಾವಗಲ್ ಅವರನ್ನು ತೆಲಂಗಾಣ ಚುನಾವಣಾ ಉಸ್ತುವಾರಿಯಾಗಿ ನೇಮಿಸಲಾಗಿತ್ತು. ಮೆಹಬೂಬ್ ನಗರ, ನಾಗರ್ ಕರ್ನೂಲ್, ಜಹೀರ್ ಬಾದ್ ಒಟ್ಟು ಮೂರು ಲೋಕಸಭಾ ಕ್ಷೇತ್ರಗಳ 21 ವಿಧಾನಸಭಾ ಕ್ಷೇತ್ರಗಳ ಪೈಕಿ 16 ವಿಧಾನಸಭಾ ಕ್ಷೇತ್ರಗಳಲ್ಲಿ ಕಾಂಗ್ರೆಸ್ ಗೆಲುವು ಸಾಧಿಸಿದ್ದು, ಯುವ ನೇತಾರ ಯಾವಗಲ್ ಅವರ ಸಂಘಟನಾತ್ಮಕ ವಿವೇಚನೆಗಳನ್ನು ಗಮನಿಸಿದ ಕಾಂಗ್ರೆಸ್ ಹೈಕಮಾಂಡ್ ಗುಜರಾತ್, ಗೋವಾ, ಮಹಾರಾಷ್ಟ್ರ ಸೇರಿದಂತೆ ಕರ್ನಾಟಕದ ಲೋಕಸಭಾ ಚುನಾವಣೆಗಳಲ್ಲೂ ಪ್ರಮುಖ ಹೊಣೆಗಾರಿಯನ್ನು ನೀಡಿತ್ತು.

ರಾಜಕೀಯ ಹಿನ್ನೆಲೆಯುಳ್ಳ ಕುಟುಂಬದಿಂದ ಬಂದಿರುವ ವಿವೇಕ್ ಯಾವಗಲ್ ಸ್ವಂತ ಪರಿಶ್ರಮದಿಂದ ರಾಷ್ಟ್ರಮಟ್ಟದ ನಾಯಕರಿಗೂ ಚಿರಪರಿಚಿತರು. ಎಲೆಕ್ಟ್ರಾನಿಕ್ ಕಮ್ಯುನಿಕೇಶನ್ ಇಂಜಿನಿಯರ್ ಆಗಿ ಪದವಿ ಮತ್ತು ದೆಹಲಿಯಲ್ಲಿ ಕಾನೂನು ಪದವಿ ಪಡೆಯುವ ಮೂಲಕ ಸುಮಾರು 12 ವರ್ಷಗಳಿಗೂ ಹೆಚ್ಚು ಕಾಲ ವಕೀಲಿ ವೃತ್ತಿಯಲ್ಲಿ ತಮ್ಮನ್ನು ತೊಡಗಿಸಿಕೊಂಡು, ಬೆಂಗಳೂರಿನಲ್ಲಿ ಸುಮಾರು 30-40 ಕಿರಿಯ ವಕೀಲರನ್ನು ತಮ್ಮದೇ ಆದ ಲಾ ಫರ್ಮ್ ಮೂಲಕ ಮುನ್ನಡೆಸಿಕೊಂಡು ಹೋಗುವ ಯಶಸ್ವಿ ವಕೀಲರಾಗಿದ್ದಾರೆ.

> ಪಕ್ಷದ ತೀರ್ಮಾನವನ್ನು ಸ್ವಾಗತಿಸಿ ಪಕ್ಷದ ಸೇವೆಗೆ ಸದಾ ಸಿದ್ಧನಾಗಿ ಕಾರ್ಯೋನ್ಮುಖನಾಗುತ್ತೇನೆ.
>
> ಪಕ್ಷವು ನನ್ನ ಜವಾಬ್ದಾರಿಯನ್ನು ಇಮ್ಮಡಿಗೊಳಿಸಿದ್ದು, ಕೃತಜ್ಞನಾಗಿ ಪಕ್ಷದ ಸಿದ್ಧಾಂತಕ್ಕೆ ಬದ್ಧನಾಗಿ, ಹೈ ಕಮಾಂಡ್ ನಿರ್ದೇಶನದಂತೆ ಈ ಕ್ಷಣದಿಂದಲೇ ಸಂಘಟನೆಯಲ್ಲಿ ತೊಡಗುತ್ತೇನೆ.
>
> **- ವಿವೇಕ್ ಯಾವಗಲ್.**

ನರಗುಂದ ಮತಕ್ಷೇತ್ರದಲ್ಲಿ ಹತ್ತಾರು ವರ್ಷಗಳಿಂದ ಕಾಂಗ್ರೆಸ್ ಪಕ್ಷದಲ್ಲಿ ನಿಸ್ವಾರ್ಥ ಸೇವೆ ಸಲ್ಲಿಸಿ ಯುವಕರ ಅಭಿಮಾನಕ್ಕೆ ಪಾತ್ರರಾಗಿ ಯುವ ನಾಯಕರಾಗಿ ಗುರುತಿಸಿಕೊಂಡು 2021ರಲ್ಲಿ ಚುನಾವಣೆ ಮೂಲಕ ರಾಜ್ಯ ಯುವ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿಯಾಗಿ ನೇಮಕಗೊಂಡು. ಇವರ ಪಕ್ಷ ಸಂಘಟನೆ, ದೃಷ್ಟಿಕೋನ, ರಾಜಕೀಯ ತಂತ್ರಗಾರಿಕೆ ದೆಹಲಿ ನಾಯಕರಿಗೂ ಹುಬ್ಬೇರಿಸುವಂತೆ ಮಾಡಿದ್ದು, ಸತತ ಎರಡನೇ ಬಾರಿಗೆ ಯುವ ಕಾಂಗ್ರೆಸ್ ಕಾರ್ಯದರ್ಶಿಯನ್ನಾಗಿ ಹೈಕಮಾಂಡ್ ಘೋಷಿಸಿದೆ.

# ಮೌಲ್ಯಮಾಪನ ಸಂಭಾವನೆ 49 ಕೋಟಿ ರೂ ಬಿಡುಗಡೆ



■ ವಿಜಯಸಾಕ್ಷಿ ಸುದ್ದಿ, ಗದಗ

ಪಿಯುಸಿ ಎಪ್ರಿಲ್ 2025ರ ಮೌಲ್ಯಮಾಪನ ಸಂಭಾವನೆಯನ್ನು ಕೂಡಲೇ ಬಿಡುಗಡೆಗೊಳಿಸುವುದಾಗಿ ಶಾಲಾ ಶಿಕ್ಷಣ ಮತ್ತು ಪರೀಕ್ಷೆ ಮೌಲ್ಯ ಮಂಡಳಿ ಅಧ್ಯಕ್ಷ ಪ್ರಕಾಶ್ ನಿಟ್ಟಾಲಿ ಹೇಳಿರುವುದಾಗಿ ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಈ ವರ್ಷದಿಂದಲೇ ಡಿಬಿಟಿ ಮೂಲಕ ಮೌಲ್ಯಮಾಪನದ ಸಂಭಾವನೆಯನ್ನು ಅವರವರ ಬ್ಯಾಂಕ್ ಖಾತೆಗೆ ವಿತರಿಸುವ ವ್ಯವಸ್ಥೆ ಜಾರಿಗೆ ಮಾಡಿದ್ದು, ಪ್ರಾಯೋಗಿಕವಾಗಿ ಹತ್ತು ಜನ ಉಪನ್ಯಾಸಕರಿಗೆ ಡಿಬಿಟಿ ಮೂಲಕ ಬಿಡುಗಡೆಗೊಳಿಸಲಾಗಿದೆ. ಅದು ಸರಿಯಾಗಿ ತಲುಪಿದೆ ಎಂಬುದನ್ನು ದೃಢೀಕರಿಸಿದ ನಂತರ ಉಳಿದ ಸುಮಾರು 27 ಸಾವಿರ ಉಪನ್ಯಾಸಕರಿಗೆ ಒಂದೇ ದಿನದಲ್ಲಿ ಬಿಡುಗಡೆಗೊಳಿಸಲು ಕ್ರಮ ಕೈಗೊಳ್ಳಲಿದ್ದಾರೆ. ಪ್ರಸ್ತುತ ಮಾಹಿತಿಯಂತೆ, ಸುಮಾರು 10 ಸಾವಿರ ಉಪನ್ಯಾಸಕರು ಮಾತ್ರ ಅವರ ಬ್ಯಾಂಕ್ ಖಾತೆಗೆ ಆಧಾರ್ ಲಿಂಕ್ ಮಾಡಿಕೊಂಡಿದ್ದು, ಉಳಿದವರು ಕೂಡ ಬ್ಯಾಂಕ್ ಖಾತೆಗೆ ಆಧಾರ್ ಲಿಂಕ್ ಮಾಡಿಕೊಳ್ಳಬೇಕಾಗಿದೆ. ಕಳೆದ ವರ್ಷದ ಮೌಲ್ಯಮಾಪನದ ಬಾಕಿ ಸಂಭಾವನೆ ಹಣ 6.5 ಕೋಟಿ ರೂಗಳನ್ನೂ ತಕ್ಷಣ ಬಿಡುಗಡೆ ಮಾಡಲು ಶಾಲಾ ಪರೀಕ್ಷಾ ಮಂಡಳಿ ವ್ಯವಸ್ಥೆ ಮಾಡಿಕೊಂಡಿರುವುದಾಗಿ ಎಸ್.ವಿ ಸಂಕನೂರ ತಿಳಿಸಿದ್ದಾರೆ.

ಶಾಲಾ ಶಿಕ್ಷಣ ಮತ್ತು ಪರೀಕ್ಷೆ ಮೌಲ್ಯ ಮಂಡಳಿ ಭೇಟಿಯ ಸಂದರ್ಭದಲ್ಲಿ ಪದವಿಪೂರ್ವ ನೌಕರರ ಸಂಘದ ಕಾರ್ಯಾಧ್ಯಕ್ಷ ಬಿ.ವಾಯ್. ಗೌಡರ ಮತ್ತು ಉಪನ್ಯಾಸಕ ಎಸ್.ಎಸ್. ಬಿರಾದರ ಉಪಸ್ಥಿತರಿದ್ದರು.

# ವ್ಯಸನಮುಕ್ತ ಸಮಾಜ ನಮ್ಮೆಲ್ಲರ ಗುರಿಯಾಗಲಿ



■ ವಿಜಯಸಾಕ್ಷಿ ಸುದ್ದಿ, ರೋಣ

ದೇಹ ಮತ್ತು ಮನಸ್ಸಿನ ಮೇಲೆ ದುಷ್ಪರಿಣಾಮ ಬೀರುವ ಯಾವುದೇ ಚಟವನ್ನು ವ್ಯಸನ ಎನ್ನಲಾಗುತ್ತದೆ. ಇಂತಹ ವ್ಯಸನಗಳಿಂದ ದೂರವಿರುವ ಮೂಲಕ ಸಮಾಜವನ್ನು ವ್ಯಸನ ಮುಕ್ತವಾಗಿಸುವುದು ನಮ್ಮೆಲ್ಲರ ಕರ್ತವ್ಯವಾಗಬೇಕು ಎಂದು ರೋಣ ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಚಂದ್ರಶೇಖರ ಬಿ.ಕಂದಕೂರ ಹೇಳಿದರು.

ಗದಗ ಜಿಲ್ಲಾಡಳಿತ ಮತ್ತು ರೋಣ ತಾಲೂಕಾಡಳಿತದ ಸಂಯುಕ್ತ ಆಶ್ರಯದಲ್ಲಿ ಡಾ. ಮಹಾಂತ ಶಿವಯೋಗಿಗಳ ಜನ್ಮ ದಿನಾಚರಣೆಯ ಅಂಗವಾಗಿ ರೋಣ ತಾಲೂಕಿನ ಸ್ವತಂತ್ರ ಪದವಿಪೂರ್ವ ಕಾಲೇಜಿನಲ್ಲಿ ಆಯೋಜಿಸಿದ್ದ ತಾಲೂಕು ಮಟ್ಟದ ವ್ಯಸನಮುಕ್ತ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡುತ್ತಿದ್ದರು.

ವಿದ್ಯಾರ್ಥಿಗಳು ತಮ್ಮ ಜೀವನದಲ್ಲಿ ಶಿಸ್ತು ಮತ್ತು ಆರೋಗ್ಯಕರ ಜೀವನಶೈಲಿಯನ್ನು ಅಳವಡಿಸಿಕೊಳ್ಳಬೇಕು. ಮದ್ಯಪಾನ, ಧೂಮಪಾನ, ಮಾದಕ ದ್ರವ್ಯಗಳ ಸೇವನೆಯಂತಹ ದುಶ್ಚಟಗಳು ದೇಹದ ಜೊತೆಗೆ ಮನಸ್ಸಿನ ಮೇಲೂ ದೀರ್ಘಕಾಲೀನ ದುಷ್ಪರಿಣಾಮ ಬೀರುತ್ತವೆ. ಇವುಗಳಿಂದ ದೂರವಿರುವುದರ ಜೊತೆಗೆ ಸಮಾಜದಲ್ಲಿ ಜಾಗೃತಿ ಮೂಡಿಸುವ ಕಾರ್ಯದಲ್ಲಿ ಯುವಕರು ಭಾಗಿಯಾಗಬೇಕು ಎಂದು ಹೇಳಿದರು.

ಸಹಾಯಕ ಆರೋಗ್ಯ ಅಧಿಕಾರಿ ಕೆ.ಎ. ಹಾದಿಮನಿ ವ್ಯಸನದಿಂದ ಉಂಟಾಗುವ

▸▸ 3ನೇ ಪುಟಕ್ಕೆ

### ಬಸಮ್ಮನವರು ಪಾಟೀಲರ ಪುಣ್ಯಸ್ಮರಣೋತ್ಸವದ ಮಹಿಳಾಗೋಷ್ಠಿಯಲ್ಲಿ ಇಂದುಮತಿ ಸಾಲಿಮಠ ಅಭಿಮತ

# ಮಹಿಳೆಯರಲ್ಲಿ ಆತ್ಮಬಲ ಹೆಚ್ಚು



■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಮಹಿಳೆಯರು ಜೀವನದಲ್ಲಿ ಏನೇ ಬಂದರೂ ಹೆದರುವುದಿಲ್ಲ. ಅವರು ಎಲ್ಲವನ್ನೂ ಗಟ್ಟಿಯಾಗಿ ಎದುರಿಸಿ ನಿಲ್ಲುತ್ತಾರೆ. ಅವರಲ್ಲಿ ಆತ್ಮಬಲ ಹೆಚ್ಚಿದೆ ಎಂದು ಹಾಸ್ಯ ಕಲಾವಿದೆ ಇಂದುಮತಿ ಸಾಲಿಮಠ ಹೇಳಿದರು.

ಪಟ್ಟಣದ ಹಿರೇಮಠದ ಸಭಾಭವನದಲ್ಲಿ ನಡೆದ ರೋಣದ ಬಸಮ್ಮನವರು ಪಾಟೀಲರ 21ನೇ ಪುಣ್ಯಸ್ಮರಣೋತ್ಸವದ ಮಹಿಳಾಗೋಷ್ಠಿಯಲ್ಲಿ ಅವರು ಮಾತನಾಡಿದರು.

ಮನೆಯನ್ನು ನಡೆಸುವ ಗುರುತರ ಜವಾಬ್ದಾರಿ ಮಹಿಳೆಯ ಮೇಲಿದೆ. ಈ ಜವಾಬ್ದಾರಿಯನ್ನು ಸಮರ್ಥವಾಗಿ ನೆರವೇರಿಸಿ ಯಶಸ್ವಿಯಾದವರು ಬಸಮ್ಮ ತಾಯಿಯವರು. ಅವರು ತಮ್ಮ ಮಕ್ಕಳಿಗೆಲ್ಲರಿಗೂ ಉತ್ತಮ ಸಂಸ್ಕಾರ ಮತ್ತು ಶಿಕ್ಷಣ ನೀಡಿದ್ದರಿಂದ ಅವರು ಈ ಸಮಾಜದಲ್ಲಿನ ಗಣ್ಯ ವ್ಯಕ್ತಿಗಳಾಗಿದ್ದಾರೆ. ಇದು ನಮ್ಮೆಲ್ಲ ತಾಯಂದಿರಿಗೆ ಮಾದರಿಯಾಗಬೇಕು ಎಂದರು.

ದಿವ್ಯ ಸಾನ್ನಿಧ್ಯ ವಹಿಸಿದ್ದ ಅಬ್ಬಿಗೇರಿ ಹಿರೇಮಠದ ಷ. ಬ್ರ. ಶ್ರೀ ವೀರಭದ್ರ ಶಿವಾಚಾರ್ಯರು ಆಶೀರ್ವಚನ ನೀಡಿ, ಒಬ್ಬ ಸಮರ್ಥ ತಾಯಿ ಹೇಗಿರಬೇಕು ಎಂಬುದಕ್ಕೆ ಬಸಮ್ಮ ತಾಯಿಯವರು ಉದಾಹರಣೆಯಾಗಿದ್ದಾರೆ. ಮನೆಗೆ ಬಂದ ಯಾರನ್ನೇ ಆಗಲಿ ಬರಿಗೈಯಲ್ಲಿ, ಬರಿ ಹೊಟ್ಟೆಯಲ್ಲಿ ಕಳಿಸಿದ ಉದಾಹರಣೆಗಳೇ ಇಲ್ಲ. ಒಂದು ಕುಟುಂಬದಲ್ಲಿನ ಸಂಸ್ಕೃತಿ ಹೇಗಿರಬೇಕು ಎಂಬುದನ್ನು ಪಾಟೀಲರ ಮನೆತನ ನೋಡಿಯೇ ಕಲಿಯಬೇಕು. ಕೇವಲ ರೋಣಕ್ಕಷ್ಟೆ ಸೀಮಿತಗೊಳಿಸದೆ ಪರ ಊರಿನಲ್ಲಿಯೂ ಇಂತಹ ಕಾರ್ಯಗಳನ್ನು ಮಾಡುವ ಮೂಲಕ ಪಾಟೀಲರ ಕುಟುಂಬ ಇತರರಿಗೆ ಮಾದರಿಯಾಗಿದೆ ಎಂದರು.

> ಸುಧಾ ಹುಚ್ಚಣ್ಣವರ ಉಪನ್ಯಾಸ ನೀಡಿ, ಬಸಮ್ಮ ತಾಯಿಯವರು ಎಲ್ಲರ ಹೃದಯದಲ್ಲಿದ್ದಾರೆ. ತಮ್ಮ ಮಕ್ಕಳನ್ನು ಈ ನಾಡಿನ ಆಸ್ತಿಯನ್ನಾಗಿಸಿದ ಅವರನ್ನು ಸ್ಮರಿಸುವುದು ನಮ್ಮೆಲ್ಲರ ಕರ್ತವ್ಯ. ಅಂದಿನ ಕಾಲದಲ್ಲಿಯೇ ರೋಣದಲ್ಲಿ ಅಕ್ಕ ಮಹಾದೇವಿ ಮಂಡಳವನ್ನು ಹುಟ್ಟು ಹಾಕಿ ಆ ಮೂಲಕ ಮಹಿಳೆಯರ ಶಿಕ್ಷಣ ಮತ್ತು ಸ್ವಾವಲಂಬಿ ಬದುಕಿಗೆ ದಾರಿ ಮಾಡಿಕೊಟ್ಟವರು ಮಾತೋಶ್ರೀ ಬಸಮ್ಮನವರು. ಸಾವಿತ್ರಿಬಾಯಿ ಫುಲೆ ಮಾಡಿದ ಕಾರ್ಯವನ್ನು ಗ್ರಾಮೀಣ ಭಾಗದಲ್ಲಿ ಬಸಮ್ಮ ತಾಯಿಯವರು ಮಾಡಿದ್ದಾರೆ. ಸಮಾಜಕ್ಕೆ ಬಸಮ್ಮ ತಾಯಿಯವರ ಕೊಡುಗೆ ಎಂದಿಗೂ ಅಮೂಲ್ಯ ಎಂದರು.

ಬಸಮ್ಮ ಲಕ್ಕನಗೌಡ್ರ ಅಧ್ಯಕ್ಷತೆ ವಹಿಸಿದ್ದರು. ಸಭೆಯನ್ನುದ್ದೇಶಿಸಿ ಅನ್ನಪೂರ್ಣಮ್ಮ

▸▸ 3ನೇ ಪುಟಕ್ಕೆ

# ಕಾಮಿಡಿ ಕಲಾವಿದ ಚಂದ್ರಶೇಖರ ಆತ್ಮಹತ್ಯೆ



■ವಿಜಯಸಾಕ್ಷಿ ಸುದ್ದಿ, ಯಲ್ಲಾಪುರ

ಕಾಮಿಡಿ ಕಿಲಾಡಿ ಖ್ಯಾತಿಯ ಯುವ ಕಲಾವಿದ, ತಾಲೂಕಿನ ಚಿಮನಳ್ಳಿಯ ಚಂದ್ರಶೇಖರ ಸಿದ್ದಿ (31) ತಾಲೂಕಿನ ಕಟ್ಟಿಗೆ ಗ್ರಾಮದಲ್ಲಿ ಆತ್ಮಹತ್ಯೆಗೆ ಶರಣಾಗಿದ್ದಾರೆ. ಇವರು ಕೆಲವು ದಿನಗಳಿಂದ ಖಿನ್ನತೆಗೆ ಒಳಗಾಗಿ ಔಷದೋಪಚಾರ ಪಡೆಯುತ್ತಿದ್ದರು ಎನ್ನಲಾಗಿದೆ.

ಗುರುವಾರ ಮದ್ಯಾಹ್ನ ಬಹಿರ್ದೆಸೆಗೆ ಹೋಗಿ ಬರುವೆನೆಂದು ಹೇಳಿ ಹೋದವರು ಅರಣ್ಯದಲ್ಲಿ ನೇಣಿಗೆ ಶರಣಾಗಿದ್ದಾರೆ. ಈತನ ಸಾವಿನಲ್ಲಿ ಶಂಕೆ ಇದ್ದು ತನಿಖೆ ನಡೆಸಬೇಕೆಂದು ಇವರ ತಾಯಿ ಲಕ್ಷ್ಮಿ ದೂರಿನಲ್ಲಿ ತಿಳಿಸಿದ್ದಾರೆ.

ತೇಲಂಗಾರ ಸಮೀಪದ ಚಿಮನಳ್ಳಿಯವರಾದ ಚಂದ್ರಶೇಖರ, ನೀನಾಸಂನಲ್ಲಿ ಅಭಿನಯ ಕಲಿತು ಉತ್ತಮ ಕಲಾವಿದರಾಗಿ ಗುರುತಿಸಿಕೊಂಡಿದ್ದರು. ಕೆಲ ವರ್ಷಗಳ ಹಿಂದೆ ಝೀ ಕನ್ನಡ ವಾಹಿನಿಯ ಕಾಮಿಡಿ ಕಿಲಾಡಿ ರಿಯಾಲಿಟಿ ಶೋದಲ್ಲಿ ಭಾಗವಹಿಸಿದ್ದರು. ತಮ್ಮ ನಟನೆಯ ಮೂಲಕ ರಾಜ್ಯದ ಗಮನ ಸೆಳೆದಿದ್ದರು. ಅಲ್ಲದೇ ಕೆಲವು ಧಾರಾವಾಹಿಗಳಲ್ಲೂ ಸಣ್ಣಪುಟ್ಟ ಪಾತ್ರಗಳನ್ನು ನಿರ್ವಹಿಸಿದ್ದರು.

# ಆಶಾ ಕಾರ್ಯಕರ್ತೆಯರಿಂದ ಆ.12ರಿಂದ ಅಹೋರಾತ್ರಿ ಸತ್ಯಾಗ್ರಹ

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ತಮ್ಮ ಬೇಡಿಕೆಗಳನ್ನು ಈಡೇರಿಸುವಂತೆ ಒತ್ತಾಯಿಸಿ, ರಾಜ್ಯದ ಆಶಾ ಕಾರ್ಯಕರ್ತೆಯರು ಆಗಸ್ಟ್ 12 ರಿಂದ 14ರ ವರೆಗೆ ನಗರದ ಫ್ರೀಡಂ ಪಾರ್ಕ್‌ನಲ್ಲಿ ಅಹೋರಾತ್ರಿ ಧರಣಿ ಸತ್ಯಾಗ್ರಹ ನಡೆಸಲು ನಿರ್ಧರಿಸಿದ್ದಾರೆ. ರಾಜ್ಯ ಸಂಯುಕ್ತ ಆಶಾ ಕಾರ್ಯಕರ್ತೆಯರ ಸಂಘದ ನೇತೃತ್ವದಲ್ಲಿ ನಡೆಯುತ್ತಿರುವ ಈ ಪ್ರತಿಭಟನೆಯಲ್ಲಿ, ತಮ್ಮ ಬೇಡಿಕೆಗಳನ್ನು ಈಡೇರಿಸುವಲ್ಲಿ ಸರ್ಕಾರ ವಿಫಲವಾಗಿದೆ ಎಂದು ಕಾರ್ಯಕರ್ತೆಯರು ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಸಂಘದ ಕಾರ್ಯದರ್ಶಿ ಡಿ. ನಾಗಲಕ್ಷ್ಮಿ ಅವರು ಮಾತನಾಡಿ, "ಕಳೆದ ಹಲವು ವರ್ಷಗಳಿಂದ ನಾವು ನಮ್ಮ ಬೇಡಿಕೆಗಳಿಗಾಗಿ ಹೋರಾಟ ನಡೆಸುತ್ತಿದ್ದೇವೆ. ಈ ಹಿಂದೆ ಅನಿರ್ದಿಷ್ಟಾವಧಿ ಧರಣಿ ನಡೆಸಿದಾಗ, ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು 10,000 ಗೌರವಧನ ನೀಡುವುದಾಗಿ ಭರವಸೆ ನೀಡಿದ್ದರು. ಆದರೆ, ಏಳು ತಿಂಗಳು ಕಳೆದರೂ ಆ ಭರವಸೆ ಈಡೇರಿಲ್ಲ" ಎಂದು ತಿಳಿಸಿದರು.

ಅಲ್ಲದೆ, "ಕಳೆದ ಬಜೆಟ್‌ನಲ್ಲಿ ಅಂಗನವಾಡಿ ಹಾಗೂ ಬಿಸಿಯೂಟ ಕಾರ್ಯಕರ್ತೆಯರ ಗೌರವಧನವನ್ನು ಹೆಚ್ಚಿಸಲಾಗಿದೆ. ಆದರೆ, ಆಶಾ ಕಾರ್ಯಕರ್ತೆಯರನ್ನು ಮಾತ್ರ ನಿರ್ಲಕ್ಷಿಸಲಾಗಿದೆ. 42,000 ಆಶಾ ಕಾರ್ಯಕರ್ತೆಯರಿಗೆ 1,000 ಗೌರವಧನ ಹೆಚ್ಚಿಸುವುದಾಗಿ ಸರ್ಕಾರ ಹೇಳಿದ್ದರೂ, ಅದು ಕೇವಲ ಭರವಸೆಯಾಗಿಯೇ ಉಳಿದಿದೆ" ಎಂದು ನಾಗಲಕ್ಷ್ಮಿ ಅವರು ಬೇಸರ ವ್ಯಕ್ತಪಡಿಸಿದರು. ಈ ಸತ್ಯಾಗ್ರಹದಲ್ಲಿ ಸಂಘದ ಉಪಾಧ್ಯಕ್ಷೆ ಟಿ.ಸಿ. ರಮಾ, ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಉಪಾಧ್ಯಕ್ಷೆ ನಾಗರತ್ನ, ಮತ್ತು ಇತರ ಕಾರ್ಯಕರ್ತೆಯರು ಭಾಗವಹಿಸಲಿದ್ದಾರೆ.

**ಸ್ವಗ್ರಾಮ ಫೆಲೋಶಿಪ್ ತ್ರೈಮಾಸಿಕ ಪ್ರಗತಿ ಅವಲೋಕನಾ ಸಭೆ ಆ.2, 3ರಂದು; ಜಗದೀಶ ಸಂಕನಗೌಡ್ರ ಮಾಹಿತಿ**

# ನರೇಗಲ್ಲದಲ್ಲಿ ವಿವಿಧ ಯೋಜನೆಗಳ ಪರಿಶೀಲನೆ

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಪಂಚಾಯತ್ ರಾಜ್ ಇಲಾಖೆಯ ಸ್ವಗ್ರಾಮ ಫೆಲೋಶಿಪ್ ಅಡಿಯಲ್ಲಿ ಆಗಿರುವ ಪ್ರಗತಿಯ ತ್ರೈಮಾಸಿಕ ಅವಲೋಕನಾ ಸಭೆಗಳು ಆಗಸ್ಟ್ 2 ಮತ್ತು 3ರಂದು ನರೇಗಲ್ಲ ಪಟ್ಟಣದಲ್ಲಿ ಜರುಗಲಿವೆ ಎಂದು ಜಗದೀಶ ಸಂಕನಗೌಡ್ರ ತಿಳಿಸಿದರು.

ಪಟ್ಟಣದಲ್ಲಿ ನಡೆಸಿದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಅವಲೋಕನಾ ಸಭೆಗೆ ಅಂದಾಜು 35 ಸದಸ್ಯರು ಪಾಲ್ಗೊಳ್ಳಲಿದ್ದು, ಅವರಿಗೆ ಗಜೇಂದ್ರಗಡ ರಸ್ತೆಯಲ್ಲಿನ ಕೆಎಸ್ಎಸ್ ಪ್ರೌಢಶಾಲೆಯಲ್ಲಿ ವಸತಿ ವ್ಯವಸ್ಥೆಯನ್ನು ಮಾಡಲಾಗಿದೆ. ಹೊರಗಿನ ಕಾರ್ಯಕ್ರಮಗಳನ್ನು ಹೊರತುಪಡಿಸಿದರೆ ಉಳಿದೆಲ್ಲ ಕಾರ್ಯಕ್ರಮಗಳು ಇದೇ ಶಾಲೆಯ ಆವರಣದಲ್ಲಿ ನಡೆಯುತ್ತವೆ ಎಂದರು.



ಆ.2ರ ಬೆಳಿಗ್ಗೆ 9.30ಕ್ಕೆ ಶಿಬಿರ ಗೀತೆಯೊಂದಿಗೆ ಊರಿನಲ್ಲಿ ಜಾಥಾ ನಡೆಸಲಾಗುವುದು. 10.30ಕ್ಕೆ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗೆ ಭೇಟಿ ನೀಡಿ ಅಲ್ಲಿ ಅನುಷ್ಠಾನಗೊಳಿಸಿರುವ ನೈತಿಕ ಶಿಕ್ಷಣದ ಯೋಜನೆಯನ್ನು ಪರಿಶೀಲಿಸಲಾಗುವುದು. ಮಧ್ಯಾಹ್ನ 12ಕ್ಕೆ ಶಿಬಿರದ ಉದ್ಘಾಟನೆ ಜರುಗಲಿದ್ದು, ಪಟ್ಟಣ ಅಭಿವೃದ್ಧಿ ಸಮಿತಿಯ ಸದಸ್ಯರೊಂದಿಗೆ ಸಭೆ ನಡೆಸುವರು. ಈ ಸಂದರ್ಭದಲ್ಲಿ ಅಧ್ಯಕ್ಷ ಶಿವನಗೌಡ ಪಾಟೀಲ ಪಟ್ಟಣ ಅಭಿವೃದ್ಧಿ ಸಮಿತಿಯಿಂದ ಪಟ್ಟಣದಲ್ಲಿ ಆಗಿರುವ ಕಾರ್ಯಗಳ ಬಗ್ಗೆ ವಿವರಿಸುವರು. ಮಧ್ಯಾಹ್ನ 2.30ಕ್ಕೆ ನೆಲಜಲ ಸಮಿತಿಯ ವತಿಯಿಂದ ಕೆರೆ ಅಭಿವೃದ್ಧಿ ಕುರಿತು ಮಾಹಿತಿ ಹಂಚಿಕೆ ನಡೆಯಲಿದ್ದು, ಗುರುರಾಜ ಕುಲಕರ್ಣಿ ಸಂಬಂಧಿಸಿದ ವಿವರಗಳನ್ನು ನೀಡುವರು. ಸಂಜೆ 4ಕ್ಕೆ ಗ್ರಾಮವಿಕಾಸದಲ್ಲಿ ಹೋರಾಟಗಳು ಕುರಿತ ಅನುಭವವನ್ನು ನಿವೃತ್ತ ಸೈನಿಕ ಶಿವಪುತ್ರಪ್ಪ ಸಂಗನಾಳ ಹಂಚಿಕೊಳ್ಳುವರು. 5.30ಕ್ಕೆ ಗರಡಿ ಮನೆ ಭೇಟಿ ಸಂದರ್ಭದಲ್ಲಿ ಕಳಕಪ್ಪ ಚೌಡಿ ಗರಡಿ ಮನೆ ಕುರಿತು ವಿಶೇಷ ವಿವರಣೆ ನೀಡುವರು. ನಂತರ ದೊಡ್ಡಾಟ ಪ್ರದರ್ಶನ, ಭಜನೆ ಮತ್ತು ಸಂಗೀತ ಕಾರ್ಯಕ್ರಮಗಳು ನಡೆಯಲಿವೆ ಎಂದು ವಿವರಿಸಿದರು

ಮಧ್ಯಾಹ್ನ 2.30ಕ್ಕೆ ಸ್ಥಳೀಯ ಸರಕಾರದೊಂದಿಗೆ ಕೆಲಸ ಮಾಡಬೇಕಾದಲ್ಲಿ ಗಮನಿಸಬೇಕಾದ ಹಾಗೂ ಆದ್ಯತೆ ನೀಡಬೇಕಾದ ಅಂಶಗಳ ಕುರಿತು ಚರ್ಚೆ, ಅನುಭವ ಹಂಚಿಕೆ, ಸಮಾರೋಪ ಸಮಾರಂಭ ನಡೆಯಲಿದೆ ಎಂದರು. ಈ ವೇಳೆ ಉಮೇಶ ಪಾಟೀಲ, ಈಶ್ವರ ಬೆಟಗೇರಿ, ಚನ್ನಬಸಪ್ಪ ಕುಷ್ಟಗಿ ಇದ್ದರು.

> ಆಗಸ್ಟ್ 3ರಂದು ಬೆಳಿಗ್ಗೆ 7ಕ್ಕೆ ಕೆರೆ ವೀಕ್ಷಣೆ, 8ಕ್ಕೆ ಪ್ರಾಣಾಯಾಮ, ಧ್ಯಾನ, ಶಿಬಿರಗೀತೆಗಳು ನಡೆಯುವವು. 9ಕ್ಕೆ ನರೇಗಲ್ಲ ವಿಕಾಸಕ್ಕಾಗಿ ರಚಿಸಿಕೊಂಡಿರುವ ವಿವಿಧ ಸಮಿತಿಗಳ ಮಾಹಿತಿ ಹಂಚಿಕೆಯನ್ನು ಡಾ. ತಿಪ್ಪೇಸ್ವಾಮಿ ಕೆ.ಟಿ ನೀಡುವರು. 10.30ಕ್ಕೆ ಕಳೆದ ಮೂರು ತಿಂಗಳಲ್ಲಿ ನಡೆಸಲಾದ ಚಟುವಟಿಕೆಗಳ ಪ್ರಗತಿ ಅವಲೋಕನ ಮತ್ತು ಮುಂದಿನ 3 ತಿಂಗಳ ಕಾರ್ಯ ಯೋಜನೆ ಬಗ್ಗೆ ಗಿರೀಶ್ ಮಾಹಿತಿ ನೀಡುವರು. 12ಕ್ಕೆ ಪಂಚಾಯತ್ ರಾಜ್ ವ್ಯವಸ್ಥೆಯ ಪರಿಚಯ, ಮಹತ್ವ ಮತ್ತು ಸ್ವಗ್ರಾಮ ಮಿತ್ರರು ತೊಡಗಿಸಿಕೊಳ್ಳಬಹುದಾದ ಸಾಧ್ಯತೆಗಳ ಕುರಿತು ಡಾ. ತಿಪ್ಪೇಸ್ವಾಮಿ ಮತ್ತು ಡಾ. ಪ್ರಕಾಶ ಭಟ್ಟ ವಿವರಣೆ ನೀಡುವರು.

# ಕ್ರೀಡೆಗಳಿಂದ ವಿದ್ಯಾರ್ಥಿಗಳಲ್ಲಿ ಹೊಸ ಚೈತನ್ಯ

■ವಿಜಯಸಾಕ್ಷಿ ಸುದ್ದಿ, ಗದಗ

ಸೋಲು, ಗೆಲುವಿಗಿಂತ ಕ್ರೀಡೆಯಲ್ಲಿ ಭಾಗವಹಿಸುವುದು ಮುಖ್ಯವಾಗಬೇಕು ಎಂದು ರೋಟರಿ ಕ್ಲಬ್‌ನ ಅಧ್ಯಕ್ಷ ಚೇತನ ಅಂಗಡಿ ಹೇಳಿದರು.

ಇತ್ತೀಚೆಗೆ ನಗರದ ತೋಂಟ-ದ ಸಿದ್ಧೇಶ್ವರ ಪದವಿಪೂರ್ವ ಮಹಾವಿದ್ಯಾಲಯದ ವಾರ್ಷಿಕ ಕೀಡಾಕೂಟಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ಕ್ರೀಡಾ ಚಟುವಟಿಕೆಯಲ್ಲಿ ಪಾಲ್ಗೊಳ್ಳುವುದರಿಂದ ಮಾನಸಿಕ, ದೈಹಿಕ ಬೆಳವಣಿಗೆ ಯಾಗುವುದರ ಜೊತೆಗೆ ವಿದ್ಯಾರ್ಥಿಗಳಲ್ಲಿ ಹೊಸ ಚೈತನ್ಯ ಬರುತ್ತದೆ ಎಂದರು.




ಆಡಳಿತ ಮಂಡಳಿಯ ಸದಸ್ಯ ಅಮರೇಶ ಅಂಗಡಿ ಕ್ರೀಡಾ ಧ್ವಜಾರೋಹಣ ನೆರವೇರಿಸಿದರು. ಅತಿಥಿಗಳಾಗಿ ಆಗಮಿಸಿದ್ದ ಮಹಾರಾಣಾ ಪ್ರತಾಪಸಿಂಹ ಕಾಲೇಜಿನ ದೈಹಿಕ ಉಪನ್ಯಾಸಕ ಶರಣಬಸವ ಚೆಗರಡ್ಡಿ, ಜ.ತೋಂ. ಶಿಕ್ಷಣ ಸಂಸ್ಥೆಯ ಕಾರ್ಯದರ್ಶಿ ಕೊಟ್ರೇಶ ಮೆಣಸಿನಕಾಯಿ, ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಪ್ರಾಚಾರ್ಯ ವಾಯ್.ಎಸ್. ಮತ್ತೂರ ಮಾತನಾಡಿದರು.

ದೈಹಿಕ ಶಿಕ್ಷಕರಾದ ಎಫ್. ಆರ್. ದೊಡ್ಡಣ್ಣವರ, ವೀರೇಶ ಸೂಡಿ, ಕಾಲೇಜಿನ ಕ್ರೀಡಾ ಕಾರ್ಯಾಧ್ಯಕ್ಷ ಕೆ.ಎಸ್. ಮಲ್ಲಾಪೂರ, ವಿದ್ಯಾರ್ಥಿ ಕಾರ್ಯದರ್ಶಿಗಳಾದ ವಿಜಯಕುಮಾರ ಹೊನ್ನಳ್ಳಿ, ಪ್ರೀತಿ ಈರಾಳ, ಫರ್ಜ ಮುಳಗುಂದ ಭಾಗವಹಿಸಿದ್ದರು. ಪ್ರತಿಭಾ ನಾಯ್ಕಲ್ ಹಾಗೂ ಸಂಗಡಿಗರು ವಚನ ಪ್ರಾರ್ಥನೆ ಹಾಡಿದರು. ಉಪನ್ಯಾಸಕರಾದ ವಿಜಯಲಕ್ಷ್ಮೀ ಕೊಣ್ಣೂರ ಸ್ವಾಗತಿಸಿದರು. ಪ್ರತಿಭಾ ಆರ್ ನಿರೂಪಿಸಿದರು. ಪ್ರತಿಭಾ ಪಟ್ಟೇದ ವಂದಿಸಿದರು.

# ವಿದ್ಯಾರ್ಥಿಗಳಿಗೆ ನೋಟ್‌ಬುಕ್ ವಿತರಣೆ

■ವಿಜಯಸಾಕ್ಷಿ ಸುದ್ದಿ, ಗದಗ

ಜಯ ಕರ್ನಾಟಕ ಜನಪರ ವೇದಿಕೆಯ ರಾಜ್ಯಾಧ್ಯಕ್ಷರ ಜನ್ಮದಿನದ ಅಂಗವಾಗಿ ಶಿರಹಟ್ಟಿ ತಾಲೂಕಿನ ಬೆಳ್ಳಟ್ಟಿ ಗ್ರಾಮದ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಯ ವಿದ್ಯಾರ್ಥಿಗಳಿಗೆ ನೋಟ್‌ಬುಕ್, ಪೆನ್ ವಿತರಿಸಿದರು.

ಈ ಸಂದರ್ಭದಲ್ಲಿ ರಾಜ್ಯ ಉಪಾಧ್ಯಕ್ಷ ಹಾಲಪ್ಪ ವರವಿ, ಜಿಲ್ಲಾ ಅಧ್ಯಕ್ಷ ಯಲ್ಲಪ್ಪ ವಳಗೇರ, ಲಕ್ಷ್ಮೇಶ್ವರ ತಾಲೂಕಿನ ಅಧ್ಯಕ್ಷ ಮಾಲತೇಶ್ ರಗಟಿ, ಶಿರಹಟ್ಟಿ ತಾಲೂಕಿನ ಅಧ್ಯಕ್ಷ ಸಂತೋಷ್ ವಡ್ಡರ, ಬೆಳ್ಳಟ್ಟಿ ಶಹರ ಘಟಕದ ಅಧ್ಯಕ್ಷ ನಾಗರಾಜ್ ಹಮ್ಮಿಗಿ, ಜಿಲ್ಲಾ ಉಪಾಧ್ಯಕ್ಷ ಬಸವರಾಜ ಹಳೆಮ್ಮನವರ, ಪದಾಧಿಕಾರಿಗಳಾದ ಹನುಮಂತ ವಳೆಗೇರಿ, ಅರ್ಜುನ್, ಲಕ್ಷ್ಮಣ್, ಗೌರೇಶ, ವೆಂಕಟೇಶ್, ಶರೀಫ್, ಇಮಾಮ್ ಸೇರಿದಂತೆ ಮುಖ್ಯೋಪಾಧ್ಯಾಯರು, ಶಿಕ್ಷಕ ವೃಂದದವರಿದ್ದರು.



**ಜನಪದ ಸಂಗೀತ ಕಲಾ ತರಬೇತಿಗೆ ಚಾಲನೆ ನೀಡಿದ ನಂದಾ ಹಣಬರಟ್ಟಿ**

# ಜೀವನ ಶೈಲಿಯನ್ನು ಪರಿಚಯಿಸುವ ಜನಪದ ಸಂಗೀತ

■ವಿಜಯಸಾಕ್ಷಿ ಸುದ್ದಿ, ಗದಗ

ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಸಮಾಜ ಕಲ್ಯಾಣ ಇಲಾಖೆ ಸಹಯೋಗದಲ್ಲಿ 2025-26ನೇ ಸಾಲಿನ ಗಿರಿಜನ ಉಪಯೋಜನೆಯಡಿ ಜನಪದ ಸಂಗೀತ ಕಲಾ ತರಬೇತಿ ಕಾರ್ಯಕ್ರಮಕ್ಕೆ ಬುಧವಾರ ಗದಗ ನಗರದ ಗಂಗಿಮಡಿಯಲ್ಲಿರುವ ಸರ್ಕಾರಿ ಮೆಟ್ರಿಕ್ ನಂತರದ (ಪ.ಪಂ) ಬಾಲಕರ ವಸತಿ ನಿಲಯದಲ್ಲಿ ಚಾಲನೆ ನೀಡಲಾಯಿತು.




ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕಿ ನಂದಾ ಹಣಬರಟ್ಟಿ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿ, ಜನಪದ ಸಂಗೀತ ನಾಡಿನ ಜನರ ಜೀವನ ಶೈಲಿಯನ್ನು ಪರಿಚಯಿಸುವ ಪರಂಪರೆಯಾಗಿದೆ. ಜನಪದ ಸಂಗೀತದ ಮೂಲಕ ನಮ್ಮ ಸಂಪ್ರದಾಯಿಕ ಜೀವನ ಶೈಲಿಯನ್ನು ಕಟ್ಟಿಕೊಡುವ ಮೂಲಕ ಮುಂದಿನ ಪೀಳಿಗೆಗೆ ಇದನ್ನು ಪರಿಚಯಿಸುವ ಸಂಗೀತವಾಗಿದೆ. ಇದನ್ನು ಉಳಿಸಿ ಬೆಳೆಸುವ ಸದುದ್ದೇಶದಿಂದ ಸರ್ಕಾರ ವಸತಿ ಶಾಲೆಯ ಮಕ್ಕಳಿಗೆ ನುರಿತ ತರಬೇತಿದಾರರಿಂದ ಕಲಾ ತರಬೇತಿ ಕಾರ್ಯಕ್ರಮವನ್ನು ಮುಂದಿನ ಆರು ತಿಂಗಳ ಕಾಲ ನಡೆಸಿಕೊಡಲಿದೆ ಎಂದರು.

> ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಸಹಾಯಕ ನಿರ್ದೇಶಕ ವಸಂತ ಮಡ್ಲೂರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿ, ಸರ್ಕಾರ ಮಕ್ಕಳಿಗೆ ಉಚಿತ ಶಿಕ್ಷಣ, ವಸತಿ ಜೊತೆಗೆ ಜನಪದ ಸಂಗೀತ ತರಬೇತಿಯನ್ನು ನೀಡುತ್ತಿರುವುದು ಸಂತಸದ ವಿಷಯ. ವಿದ್ಯಾರ್ಥಿಗಳಲ್ಲಿ ಅಡಗಿರುವ ಸಂಗೀತ ಪ್ರತಿಭೆ ಅನಾವರಣಕ್ಕೆ ಈ ತರಬೇತಿ ಸಹಕಾರಿಯಾಗಲಿದೆ ಎಂದರು.

ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ವೀರಯ್ಯ ಸ್ವಾಮಿ ಬಿ ಪ್ರಾಸ್ತಾವಿಕವಾಗಿ ಮಾತನಾಡಿ, ಇಲಾಖೆಯಿಂದ ನುರಿತ ತರಬೇತಿದಾರರನ್ನು ನಿಯೋಜಿಸುವ ಮೂಲಕ ವಾದ್ಯ ಪರಿಕರಗಳ ಜೊತೆಗೆ ವಾರದಲ್ಲಿ ಮೂರು ದಿನದಂತೆ ಮುಂದಿನ ಆರು ತಿಂಗಳವರೆಗೆ ವಸತಿ ನಿಲಯದ ಮಕ್ಕಳಿಗೆ ಜನಪದ ಸಂಗೀತ ತರಬೇತಿ ನೀಡಲಾಗುತ್ತಿದ್ದು, ಇದನ್ನು ಮಕ್ಕಳು ಸದುಪಯೋಗಪಡಿಸಿಕೊಳ್ಳುವಂತೆ ತಿಳಿಸಿದರು. ಕಾರ್ಯಕ್ರಮದಲ್ಲಿ ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕರಾದ ಮಂಜುಳಾ ಎನ್, ಗದಗ ಸರಕಾರಿ ಮೆಟ್ರಿಕ್ ನಂತರದ (ಪ.ಪಂ)ಬಾಲಕರ ವಸತಿ ನಿಲಯಪಾಲಕರಾದ ರಿಯಾಜ್ ಅಗರಖೇಡ, ಎಚ್.ಎಸ್. ವೆಂಕಟಾಪೂರದ ಜನಪದ ಕಲಾವಿದರಾದ ಗೌಡಪ್ಪ ಬೊಮ್ಮಪ್ಪನವರ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ರಾಜಕುಮಾರ ಸೋಪಡ್ಲಾ, ನವೀನ ಪತ್ತಾರ ಹಾಜರಿದ್ದರು.

# ವಿದ್ಯಾರ್ಥಿಗಳ ಶ್ರೇಯೋಭಿವೃದ್ಧಿಯೇ ಶಿಕ್ಷಕರ ಗುರಿ



■ವಿಜಯಸಾಕ್ಷಿ ಸುದ್ದಿ, ಮುಳಗುಂದ

ಶಿಕ್ಷಕರ ವೃತ್ತಿ ಅತ್ಯಂತ ಪವಿತ್ರವಾದದ್ದು ಎಂದು ಗದಗ ಜಿಲ್ಲಾ ಪ್ರಾಥಮಿಕ ಶಿಕ್ಷಕರ ಸಂಘದ ಅಧ್ಯಕ್ಷ ವಿ.ಎಂ. ಹಿರೇಮಠ ಹೇಳಿದರು.

ಅವರು ಪಟ್ಟಣದ ಸಮೀಪದ ಬಾಸಪೂರ ಗ್ರಾಮದ ಸರಕಾರಿ ಹಿರಿಯ ಪ್ರಾಥಮಿಕ ಶಾಲೆಯ ನಿವೃತ್ತಿ ಶಿಕ್ಷಕಿ ಎಸ್.ಎಸ್. ಹುಲ್ಲಲ್ಲಿಯವರನ್ನು ಸನ್ಮಾನಿಸಿ ಮಾತನಾಡುತ್ತಿದ್ದರು.

ಹೆತ್ತ ತಂದೆ-ತಾಯಿ, ಕಲಿಸಿದ ಗುರುಗಳನ್ನು ಎಂದೂ ಮರೆಯಬಾರದು. ನಿವೃತ್ತಿ ಸಹಜವಾದ ಪ್ರಕ್ರಿಯೆ. ತಮ್ಮ ವೃತ್ತಿಯ ಸಮಯದಲ್ಲಿ ಕಾಯಕ ನಿಷ್ಠೆಯಿಂದ ಮಕ್ಕಳಿಗೆ ಅಪಾರ ಜ್ಞಾನ ನೀಡಿದ ಶಿಕ್ಷಕರಿಗೆ ಮಕ್ಕಳು ಶ್ರೇಯೋಭಿವೃದ್ಧಿ ಹೊಂದಿದಾಗ ಆತ್ಮತೃಪ್ತಿ ಸಿಗುತ್ತದೆ ಎಂದರು.

ಅಧ್ಯಕ್ಷತೆಯನ್ನು ದ್ಯಾಮಣ್ಣ ಗಂಟೆಣ್ಣವರ ವಹಿಸಿದ್ದರು. ಪಟ್ಟಣ ಪಂಚಾಯಿತಿ ಅಧ್ಯಕ್ಷೆ ಯಲ್ಲಮ್ಮ ಕವಲೂರ, ಎಸ್.ಆರ್. ಭಂಡಿ, ಎಂ.ಎಂ. ಮೇಗಲಮನಿ, ಸಿ.ಆರ್.ಪಿ ಎಂ.ಎಂ. ನಿಂಬನಯ್ಕರ, ಶಾಲಾ ಪ್ರಧಾನ ಗುರು ಬಿ.ವಿ. ಹುಡೇದ, ಪಿ.ಬಿ. ಕೆಂಚನಗೌಡರ ಇದ್ದರು.

# ನಾಗರ ಪಂಚಮಿ ನಿಮಿತ್ತ ಹಾಲು ವಿತರಣೆ



■ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಬಸವದಳದ, ಬಸವಕೇಂದ್ರ, ಲಿಂಗಾಯತ ಪ್ರಗತಿಶೀಲ ಸಂಘ ಸಂಘಟನೆಗಳ ಸಂಯುಕ್ತಾಶ್ರಯದಲ್ಲಿ ಗದುಗಿನ ವಿಶ್ವಕಲ್ಯಾಣ ಸಂಸ್ಥೆಯ ಭುವನೇಶ್ವರಿ ವಿಶೇಷ ಅಗತ್ಯವುಳ್ಳ ಮಕ್ಕಳ ಶಾಲೆಯಲ್ಲಿ ಪೂಜ್ಯ ಡಾ. ಮಹಾಂತಬಸವಲಿಂಗ ಸ್ವಾಮಿಗಳು ಬೇಲೂರು ಇವರ ಸಾನ್ನಿಧ್ಯದಲ್ಲಿ ನಾಗರ ಪಂಚಮಿಯ ನಿಮಿತ್ತ ಮಕ್ಕಳಿಗೆ ಹಾಲು, ಬಿಸ್ಕಿಟ್ ವಿತರಿಸಲಾಯಿತು.

ಪೂಜ್ಯ ಡಾ. ಮಹಾಂತಬಸವಲಿಂಗ ಸ್ವಾಮಿಗಳು ಹಾಲಿನ ಮಹತ್ವ ವಿವರಿಸಿ, ಜನ ಕಲ್ಲು ನಾಗರಕ್ಕೆ, ಮಣ್ಣು ನಾಗರಕ್ಕೆ ಹಾಲು ಎರೆದು ಹಾಳು ಮಾಡದೇ ಇಂತಹ ದೇವರ ಸ್ವರೂಪರಾದ ಮಕ್ಕಳಿಗೆ ವಿತರಿಸುವ ಮೂಲಕ ಆಚರಿಸಬೇಕೆಂದು ಕರೆ ನೀಡಿದರು.

ಲಿಂಗಾಯತ ಪ್ರಗತಿಶೀಲ ಸಂಘದ ಅಧ್ಯಕ್ಷ ಬಾಲಣ್ಣ ಭರಮಗೌಡ್ರ, ಬಸವದಳದ ಅಧ್ಯಕ್ಷ ವಿ.ಕೆ. ಕರೀಗೌಡ್ರ, ಜಾಗತಿ-ಕ ಲಿಂಗಾಯತ ಮಹಾಸಭಾದ ಕಾರ್ಯದರ್ಶಿ ಶೇಖಣ್ಣ ಕವಳಿಕಾಯಿ, ನಗರಸಭೆ ಸದಸ್ಯರಾದ ಚಂದ್ರಣ್ಣ ತಡಸದ, ಶ್ರೀಮಠದ ಭಕ್ತರು, ಬಸವಾಭಿಮಾನಿಗಳು ಪಾಲ್ಗೊಂಡಿದ್ದರು. ಪ್ರಕಾಶ ಅಸುಂಡಿ ಕಾರ್ಯಕ್ರಮ ನಿರೂಪಿಸಿದರು.

ವಿಶ್ವಕಲ್ಯಾಣ ಸಂಸ್ಥೆಯ ಅಧ್ಯಕ್ಷ ಮಂಜುನಾಥ ಹದ್ದಣ್ಣನವರು ಪೂಜ್ಯರನ್ನು ಹಾಗೂ ಬಸವಪರ ಸಂಘಟನೆಗಳನ್ನು ಶ್ಲಾಘಿಸಿದರು. ನಂತರ ಜಿಲ್ಲಾ ಆಸ್ಪತ್ರೆಯಲ್ಲಿ ನಡೆದ ಕಾರ್ಯಕ್ರಮದಲ್ಲಿ ಸಂಸ್ಥೆಯ ನಿರ್ದೇಶಕ ಡಾ. ಬಸವರಾಜ ಬೊಮ್ಮನಹಳ್ಳಿ ಅಧ್ಯಕ್ಷತೆ ವಹಿಸಿದ್ದರು. ಮೆಡಿಕಲ್ ಸುಪರಿಡೆಂಡೆಂಟ್ ಡಾ. ರೇಖಾ ಸೋನೆವಾನೆ, ಡಾ. ಹಳೇಮನಿ, ಜ.ತೋ. ಮಠ ಜಾತ್ರಾ ಸಮಿತಿ ಅಧ್ಯಕ್ಷ ಡಾ. ಧನೇಶ ದೇಸಾಯಿ, ಚಂದ್ರು ತಡಸದ, ವಿ.ಕೆ. ಕರಿಗೌಡ್ರ, ಶಿವಸಂಗಮ ಗ್ರುಪ್‌ನ ಪಾಲುದಾರರಾದ ಎಂ.ಬಿ. ಲಿಂಗಧಾಳ ಭಾಗವಹಿಸಿದ್ದರು.

ಗೌರಕ್ಕ ಬಡಿಗಣ್ಣನವರ ಮಾತನಾಡಿದರು. ಎನ್. ಎಂ. ಪವಾಡಿಗೌಡ್ರ ಶೇಖಣ್ಣಾ ಕವಳಿಕಾಯಿ ಕಾರ್ಯಕ್ರಮ ನಿರೂಪಿಸಿದರು.

**ವಿಶೇಷ ಘಟಕ ಯೋಜನೆಯಡಿ ಸುಗಮ ಸಂಗೀತ ಕಲಾ ತರಬೇತಿಗೆ ಚಾಲನೆ**

# ಗದಗ ಜಿಲ್ಲೆ ಸಂಗೀತದಲ್ಲಿ ಸಮೃದ್ಧವಾಗಿದೆ

■ವಿಜಯಸಾಕ್ಷಿ ಸುದ್ದಿ, ಗದಗ

ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಸಮಾಜ ಕಲ್ಯಾಣ ಇಲಾಖೆ ಸಹಯೋಗದಲ್ಲಿ 2025-26ನೇ ಸಾಲಿನ ವಿಶೇಷ ಘಟಕ ಯೋಜನೆಯಡಿ ಸುಗಮ ಸಂಗೀತ ಕಲಾ ತರಬೇತಿ ಕಾರ್ಯಕ್ರಮಕ್ಕೆ ಬುಧವಾರ ಗದಗನ ರಾಜೀವ ಗಾಂಧಿ ನಗರದ ಡಾ. ಬಿ.ಆರ್. ಅಂಬೇಡ್ಕರ್ ಸರ್ಕಾರಿ ಮೆಟ್ರಿಕ್ ಪೂರ್ವ ಬಾಲಕಿಯರ ವಸತಿ ನಿಲಯದಲ್ಲಿ ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕಿ ನಂದಾ ಹಣಬರಟ್ಟಿ ಚಾಲನೆ ನೀಡಿದರು.




ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಸಹಾಯಕ ನಿರ್ದೇಶಕ ವಸಂತ ಮಡ್ಲೂರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿ, ವಿಶ್ವದಲ್ಲಿ ಸಂಗೀತ ಕ್ಷೇತ್ರಕ್ಕೆ ಭಾರತ ರತ್ನ ಪ್ರಶಸ್ತಿ ಪಡೆದ ಏಕೈಕ ಸಂಗೀತ ವಿದ್ವಾಂಸರಾದ ಪಂಡಿತ ಭೀಮಸೇನ ಜೋಶಿ ಗದುಗಿನವರು. ಜೊತೆಗೆ ರಾಜ್ಯದಲ್ಲಿ ಗದಗ ಎಂದ ತಕ್ಷಣ ಗಾನಯೋಗಿ ಪಂಡಿತ ಪುಟ್ಟರಾಜ ಗವಾಯಿ ಸಂಗೀತ ಪಾಠಶಾಲೆ ಎಲ್ಲರಿಗೂ ನೆನಪಾಗುತ್ತದೆ. ಅಂತಹ ಸಂಗೀತದ ಪರಂಪರೆ ಹೊಂದಿರುವ ಗದಗ ಜಿಲ್ಲೆ ಸಂಗೀತದಲ್ಲಿ ಸಮೃದ್ಧವಾಗಿದೆ. ಸರ್ಕಾರ ಮಕ್ಕಳಿಗೆ ಸುಗಮ ಸಂಗೀತ ತರಬೇತಿಯನ್ನು ನೀಡುತ್ತಿರುವುದು ಸಂತಸದ ವಿಷಯವಾಗಿದೆ ಎಂದರು.

> ಕಾರ್ಯಕ್ರಮದಲ್ಲಿ ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕಿ ಮಂಜುಳಾ ಎನ್ ಮಾತನಾಡಿ, ವಸತಿ ಶಾಲೆಯ ಮಕ್ಕಳಿಗೆ ಈಗಾಗಲೇ ಸರ್ಕಾರ ಹತ್ತಾರು ಸೌಲಭ್ಯಗಳನ್ನು ನೀಡಿ ಪ್ರೋತ್ಸಾಹಿಸುತ್ತಿದೆ. ಇದರೊಂದಿಗೆ ಸಂಗೀತ ಅಭ್ಯಾಸ ಮಾಡಲು ಅನುವು ಮಾಡಿಕೊಟ್ಟಿರುವುದು ಸಂತಸ ತಂದಿದೆ ಎಂದರು.

ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ವೀರಯ್ಯ ಸ್ವಾಮಿ ಬಿ ಪ್ರಾಸ್ತಾವಿಕವಾಗಿ ಮಾತನಾಡಿ, ವಸತಿ ಶಾಲೆಯ ಮಕ್ಕಳಿಗೆ ಸುಗಮ ಸಂಗೀತ ತರಬೇತಿಯನ್ನು ನುರಿತ ಕಲಾವಿದರಿಂದ ಮುಂದಿನ ಆರು ತಿಂಗಳವರೆಗೆ ನೀಡಲಾಗುವುದು. ವಾದ್ಯ ಪರಿಕರಗಳ ಜೊತೆಗೆ ತರಬೇತಿಯನ್ನು ನೀಡಲಾಗುತ್ತಿದ್ದು, ಮಕ್ಕಳು ತಮಗಿರುವ ಸಂಗೀತದ ಅಭಿರುಚಿಯನ್ನು ಅಭಿವ್ಯಕ್ತಿಗೊಳಿಸುವ ಮೂಲಕ ಸಂಗೀತ ಕಲಾವಿದರಾಗಲು ಇದೊಂದು ಸುವರ್ಣಾವಕಾಶವಾಗಿದೆ ಎಂದರು. ಕಾರ್ಯಕ್ರಮದಲ್ಲಿ ಡಾ. ಬಿ.ಆರ್. ಅಂಬೇಡ್ಕರ್ ಸರ್ಕಾರಿ ಮೆಟ್ರಿಕ್ ಪೂರ್ವ ಬಾಲಕಿಯರ ವಸತಿ ನಿಲಯಪಾಲಕಿ ವಿದ್ಯಾ ಬೆಳವಣಕಿ, ಪಾಪನಾಶಿ ತಾಂಡಾದ ಸುಗಮ ಸಂಗೀತ ಕಲಾವಿದರಾದ ಸಾವಿತ್ರಿ ಎಂ.ಲಮಾಣಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ರಾಜಕುಮಾರ ಸೋಪಡ್ಲಾ, ನವೀನ ಪತ್ತಾರ ಹಾಜರಿದ್ದರು.

## ವ್ಯಸನಮುಕ್ತ ಸಮಾಜ ನಮ್ಮೆಲ್ಲರ ಗುರಿಯಾಗಲಿ

▸▸ ಮೊದಲನೇ ಪುಟದಿಂದ

ಕಾಯಿಲೆಗಳು, ಸಾಮಾಜಿಕ ಮತ್ತು ಆರ್ಥಿಕ ಸಮಸ್ಯೆಗಳ ಬಗ್ಗೆ ಮಾಹಿತಿ ನೀಡಿ, ವ್ಯಸನ ಮುಕ್ತ ಸಮಾಜವು ಕೇವಲ ಕನಸಲ್ಲ, ಅದನ್ನು ನಾವೆಲ್ಲರೂ ಒಗ್ಗಟ್ಟಿನಿಂದ ಸಾಧಿಸಬಹುದು. ಇದಕ್ಕಾಗಿ ಯುವಕರು ಮುಂಚೂಣಿಯಲ್ಲಿ ನಿಲ್ಲಬೇಕು ಎಂದು ಕರೆ ನೀಡಿದರು.

ಕಾರ್ಯಕ್ರಮದಲ್ಲಿ ತಾಲೂಕಾ ಆರೋಗ್ಯ ಇಲಾಖೆಯ ಅಧಿಕಾರಿಗಳಾದ ಡಾ. ಬಸವರಾಜ ಭಜಂತ್ರಿ, ಸಹಾಯಕ ಆರೋಗ್ಯ ಅಧಿಕಾರಿ ಕೆ.ಎ. ಹಾದಿಮನಿ, ಉಪ ತಹಸೀಲ್ದಾರ ಗಣೇಶ ಕೊಪ್ಪದ, ತಾಲೂಕಾ ಸಮಜಾ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕಿ ಗೀತಾ ಆಲೂರ ಸೇರಿದಂತೆ ಗಣ್ಯರು, ಶಾಲಾ ಶಿಕ್ಷಕರು, ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

## ಮಹಿಳೆಯರಲ್ಲಿ ಆತ್ಮಬಲ ಹೆಚ್ಚು

▸▸ ಮೊದಲನೇ ಪುಟದಿಂದ

ಜಿ.ಪಾಟೀಲ ಮಾತನಾಡಿದರು. ವೇದಿಕೆಯ ಮೇಲೆ ಮಂಜುಳಾ ರೇವಡಿ, ಪಿಎಸ್ಐ ಐಶ್ವರ್ಯ ನಾಗರಾಳ, ಬಸಮ್ಮ ಪಾಟೀಲ, ರೇಣುಕಾ ಧರ್ಮಾಯತ, ಬಸಿರಾಬಾನು ನದಾಫ್, ಮಂಜುಳಾ ಹುಲ್ಲಮ್ಮನವರ, ಡಾ. ಶಶಿಕಲಾ ಅಂಗಡಿ, ಶಶಿಕಲಾ ಪಾಟೀಲ ಮುಂತಾದವರು ಉಪಸ್ಥಿತರಿದ್ದರು.

ರತ್ನಮ್ಮ ದಢೇಸೂರಮಠ ಪ್ರಾಸ್ತಾವಿಕ ನುಡಿಗಳನ್ನಾಡಿದರು. ಕಸ್ತೂರಿ ಧನ್ನೂರ ಸ್ವಾಗತಿಸಿದರು. ಗೀತಾ ಭೋಪಳಾಪೂರ ಪ್ರಾರ್ಥಿಸಿದರು. ಭಾರತಿ ಶಿರ್ಸಿ, ಮಂಜುಳಾ ಪಾಟೀಲ ಮತ್ತು ನಿರ್ಮಲಾ ಹಿರೇಮಠ ನಿರ್ವಹಿಸಿದರು. ಶಾಸಕ ಜಿ.ಎಸ್. ಪಾಟೀಲ ಕುಟುಂಬದ ಸದಸ್ಯರು, ಕಾರ್ಯಕರ್ತರು, ಮಹಿಳೆಯರು ಪಾಲ್ಗೊಂಡಿದ್ದರು.

### ಶಾಸಕ ಡಾ. ಚಂದ್ರು ಲಮಾಣಿ ಜನ್ಮದಿನಾಚರಣೆ ಅಂಗವಾಗಿ ಬಡ ವಿದ್ಯಾರ್ಥಿಗಳಿಗೆ ನೆರವು

# ಸತ್ಕಾರ್ಯದ ಫಲ ಶ್ರೇಷ್ಠವಾಗಿರುತ್ತದೆ



ಶಾಸಕ ಡಾ. ಚಂದ್ರು ಲಮಾಣಿ ಮಾತನಾಡಿ, ಶೈಕ್ಷಣಿಕವಾಗಿ ಎಲ್ಲ ಮಕ್ಕಳು ಸಾಧನೆ ಮಾಡಬೇಕು. ಪ್ರತಿಯೊಬ್ಬ ಮಗುವಿಗೂ ಕಲಿಯುವದಕ್ಕೆ ಅವಕಾಶ ಒದಗಿಸಿಕೊಡುವದು ಅವಶ್ಯವಾಗಿದೆ. ಸರಕಾರಿ ಶಾಲೆಗಳಲ್ಲಿರುವ ಮಕ್ಕಳ ಶೈಕ್ಷಣಿಕ ಮಟ್ಟ ಸುಧಾರಿಸಬೇಕು ಎಂಬ ಉದ್ದೇಶದಿಂದ ನೋಟ್‌ಬುಕ್, ಪೂರಕ ಉಪಕರಣ ಮತ್ತು ಉಚಿತ ಟ್ಯೂಷನ್ ಕ್ಲಾಸ್ ಮಾಡಲಾಗುತ್ತಿದೆ. ಸರಕಾರಿ ಶಾಲೆಗಳ ಬಲವರ್ಧನೆಗೆ ಗಮನ ಹರಿಸಲಾಗುತ್ತಿದೆ. ಕ್ಷೇತ್ರದ ಸಮಗ್ರ ಅಭಿವೃದ್ಧಿಗೆ ಸಂಬಂಧಪಟ್ಟ ಸಚಿವರೊಂದಿಗೆ ಸದಾ ಸಂಪರ್ಕದಲ್ಲಿದ್ದೇನೆ. ಜನರ ನಿರೀಕ್ಷೆ ಹುಸಿಯಾಗದಂತೆ ಕ್ಷೇತ್ರದ ಅಭಿವೃದ್ಧಿಗೆ ಸದಾ ಪ್ರಾಮಾಣಿಕವಾಗಿ ಕೆಲಸ ಮಾಡುವದಾಗಿ ಹೇಳಿದರು.

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಸಮಾಜದಲ್ಲಿನ ಬಡವರ, ನೊಂದವರ, ಹಿಂದುಳಿದವರ ಕಷ್ಟಕ್ಕೆ ಸ್ಪಂದಿಸುವ ಕಾರ್ಯ ನಿರಂತರವಾಗಿ ನಿಮ್ಮಿಂದ ಆದಾಗ ಆ ಕಾರ್ಯದ ಫಲ ಶ್ರೇಷ್ಠವಾಗಿರುತ್ತದೆ ಎಂದು ಹೂವಿನ ಶಿಗ್ಲಿಯ ವಿರಕ್ತ ಮಠದ ಚನ್ನವೀರ ಮಹಾಸ್ವಾಮಿಗಳು ಹೇಳಿದರು.

ಅವರು ಶುಕ್ರವಾರ ಪಟ್ಟಣದ ವೀರ ಗಂಗಾಧರ ಸಮುದಾಯದ ಭವನದಲ್ಲಿ ಡಾ. ಚಂದ್ರು ಲಮಾಣಿ ಅಭಿಮಾನಿ ಬಳಗದಿಂದ ಶಾಸಕ ಡಾ. ಚಂದ್ರು ಲಮಾಣಿ ಅವರ ಜನ್ಮದಿನಾಚರಣೆ ಅಂಗವಾಗಿ ಎಸ್‌ಎಸ್‌ಎಲ್‌ಸಿ ಓದುತ್ತಿರುವ ಬಡ ವಿದ್ಯಾರ್ಥಿಗಳಿಗೆ ನೋಟ್‌ಬುಕ್ ಹಾಗೂ ಅಧ್ಯಯನ ಸಾಮಗ್ರಿಗಳ ವಿತರಣೆ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡುತ್ತಿದ್ದರು.

ನಾವು ಮಾಡುವ ಕೆಲಸಗಳು ನಮ್ಮನ್ನು ಜನ ಮಾನಸದಲ್ಲಿ ನೆಲೆ ನಿಲ್ಲುವಂತೆ ಮಾಡುತ್ತವೆ. ಶ್ರೇಷ್ಠವಾದ ಮನುಷ್ಯ ಜನ್ಮ ಸಾರ್ಥಕವಾಗಬೇಕಾದಲ್ಲಿ ಉಸಿರಿನ ನಂತರವೂ ಹೆಸರುಳಿಯುವ ಕಾರ್ಯ ಮಾಡಬೇಕು ಮತ್ತು ಅದು ಧರ್ಮ ಮಾರ್ಗದಿಂದ ಕೂಡಿರಬೇಕು. ಅಧಿಕಾರ ಸದಾವಕಾಶದಿಂದ ಜನಪರ ಕಾರ್ಯ ನಿಮ್ಮಿಂದಾಗಲಿ. ಕ್ಷೇತ್ರಕ್ಕೆ ಹಲವಾರು ಜನಪರ ಯೋಜನೆಗಳನ್ನು ತರುವ ಮೂಲಕ ಮಾದರಿ ಕ್ಷೇತ್ರವಾಗಿ ಬದಲಾಯಿಸುವ ಕಾರ್ಯವಾಗಲಿ ಎಂದು ಹಾರೈಸಿದರು.

ಮಾಜಿ ಶಾಸಕ ಗಂಗಣ್ಣ ಮಹಾಂತಶೆಟ್ಟರ ಮಾತನಾಡಿ, ಶಾಸಕರು ಕ್ಷೇತ್ರದ ಅಭಿವೃದ್ಧಿಗೆ ವಿಶೇಷ ಕೊಡುಗೆ ನೀಡುವ ಮೂಲಕ ಮಾದರಿ ಕ್ಷೇತ್ರವನ್ನಾಗಿ ಮಾಡಬೇಕು. ಸಿಕ್ಕ ಅವಕಾಶ ಬಳಸಿಕೊಳ್ಳುವ ಮೂಲಕ ಬಡಜನರಿಗೆ ನೆರವಾಗಬೇಕು. ದೇವರು ಇನ್ನೂ ಹೆಚ್ಚಿನ ಜನಸೇವೆ ಮಾಡುವ ಭಾಗ್ಯ ನಿಮ್ಮದಾಗಲಿ ಎಂದು ಹೇಳಿದರು.

ವೇದಿಕೆಯ ಮೇಲೆ ಟೋಪಣ್ಣ ಲಮಾಣಿ, ಶಿವಣ್ಣ ಲಮಾಣಿ, ಬಿ.ಎಸ್. ಹರ್ಲಾಪೂರ, ಮಲ್ಲೇಶಪ್ಪ ಲಮಾಣಿ, ಜಾನು ಲಮಾಣಿ, ಶಿಗ್ಲಿ ಯು ರಾಮಣ್ಣ ಲಮಾಣಿ, ನಿಂಗಪ್ಪ ಬನ್ನಿ, ಮಹಾದೇವಪ್ಪ ಅಣ್ಣಿಗೇರಿ, ಸಂತೋಷ ಅಕ್ಕಿ, ಗುರುಪ್ಪ ಲಮಾಣಿ, ಚನ್ನಪ್ಪ ಕೋಲಕಾರ, ಥಾವರೆಪ್ಪ ಲಮಾಣಿ, ಗಂಗಾಧರ ಮೆಣಸಿನಕಾಯಿ, ನೀಲಪ್ಪ ಹತ್ತಿ, ಎಸ್.ಕೆ. ಕಾಳಪ್ಪನವರ, ಬಿ.ಡಿ. ಪಲ್ಲೇದ ಸೇರಿದಂತೆ ಕಾರ್ಯಕರ್ತರು ಇದ್ದರು. ಉಪನ್ಯಾಸಕ ಬಸವರಾಜ ಶೆಟ್ಟರ್ ಪ್ರಾಸ್ತಾವಿಕವಾಗಿ ಮಾತನಾಡಿದರು. ಅಕ್ಕಮ್ಮ ಕೋರದಾಳ ಪ್ರಾರ್ಥಿಸಿದರು. ಕೆ.ಆರ್. ಲಮಾಣಿ, ಈಶ್ವರ ಮೆಡ್ಲೇರಿ ನಿರೂಪಿಸಿದರು.

## ನ್ಯಾನೋ ಯೂರಿಯಾ ಬಳಕೆ ಕುರಿತು ಸಲಹೆ

■ ವಿಜಯಸಾಕ್ಷಿ ಸುದ್ದಿ, ಗದಗ

2025–26ನೇ ಸಾಲಿನ ಮುಂಗಾರು ಹಂಗಾಮಿನಲ್ಲಿ ಜಿಲ್ಲೆಯಲ್ಲಿ ಉತ್ತಮವಾಗಿ ಮಳೆಯಾಗಿದ್ದು, ಬೆಳೆಗಳಿಗೆ ಮೇಲುಗೊಬ್ಬರವಾಗಿ ಯೂರಿಯಾ ರಸಗೊಬ್ಬರವನ್ನು ನೀಡಲಾಗುತ್ತಿದೆ. ರೈತರು ಶಿಫಾರಸ್ಸಿನ ಪ್ರಮಾಣಕ್ಕಿಂತ ಹೆಚ್ಚು ಯೂರಿಯಾ ರಸಗೊಬ್ಬರವನ್ನು ಮೇಲುಗೊಬ್ಬರವಾಗಿ ಬಳಸುತ್ತಿದ್ದು, ಇದರಿಂದ ಬೆಳೆಯು ಹುಲುಸಾಗಿ ಬೆಳೆದು ಕೀಟ ಮತ್ತು ರೋಗ ಬಾಧೆ ಹೆಚ್ಚಾಗುತ್ತಿದೆ. ಇವುಗಳನ್ನು ನಿಯಂತ್ರಿಸಲು ವಿವೇಚನರಹಿತವಾಗಿ ಪೀಡೆನಾಶಕಗಳನ್ನು ಬಳಸಲಾಗುತ್ತಿದೆ. ಇದು ಮಣ್ಣು, ಗಾಳಿ ಮತ್ತು ನೀರನ್ನು ಕಲುಷಿತಗೊಳಿಸಿ ಮಾನವನ ಆರೋಗ್ಯ ಮತ್ತು ಪರಿಸರದ ಮೇಲೆ ದುಷ್ಪರಿಣಾಮ ಬೀರುತ್ತಿದೆ.

ಅತಿಯಾದ ಯೂರಿಯಾ ಬಳಕೆಯಿಂದ ಮಣ್ಣು, ಪರಿಸರ ಮತ್ತು ಮಾನವನ ಆರೋಗ್ಯದ ಮೇಲಾಗುತ್ತಿರುವ ದುಷ್ಪರಿಣಾಮ ಉಂಟಾಗುತ್ತಿರುವುದರಿಂದ ಜಿಲ್ಲೆಯ ರೈತರು ಮಣ್ಣು ಪರೀಕ್ಷೆಯ ವರದಿಯನ್ವಯ ಶಿಫಾರಸ್ಸಿನಂತೆ ಯೂರಿಯಾ ರಸಗೊಬ್ಬರವನ್ನು ಬಳಸಬೇಕಾಗಿದೆ. ದ್ವಿದಳ ಧಾನ್ಯ ಬೆಳೆಗಳೊಂದಿಗೆ ಬೆಳೆ ಪರಿವರ್ತಿಸುವುದು, ಪರ್ಯಾಯ ಗೊಬ್ಬರಗಳಾದ ಸಾವಯವ ಗೊಬ್ಬರ, ಹಸಿರೆಲೆ ಗೊಬ್ಬರ, ಜೈವಿಕ ಗೊಬ್ಬರ ಹಾಗೂ ನ್ಯಾನೋ ಗೊಬ್ಬರಗಳ ಬಳಕೆಯನ್ನು ಹೆಚ್ಚಿಸಬೇಕಾಗಿದೆ.

ನ್ಯಾನೋ ರಸಗೊಬ್ಬರಗಳು ಪೋಷಕಾಂಶ ಒದಗಿಸುವ ಪರಿಣಾಮಕಾರಿ ಮಾರ್ಗವಾಗಿದೆ ಮತ್ತು ನ್ಯಾನೋ ರಸಗೊಬ್ಬರಗಳ ಸಿಂಪಡಿಸುವಿಕೆಯು ರಾಸಾಯನಿಕ ಗೊಬ್ಬರಗಳಿಂದ ಮಣ್ಣಿನ ಆರೋಗ್ಯವನ್ನು ಉಳಿಸುತ್ತದೆ ಹಾಗೂ ಇದು ಪರಿಸರ ಸ್ನೇಹಿಯಾಗಿದೆ. ಒಂದು ಬಾಟಲ್ ನ್ಯಾನೋ ಯೂರಿಯಾ ಒಂದು ಚೀಲ ರಸಗೊಬ್ಬರಕ್ಕೆ ಸಮವಾಗಿರುತ್ತದೆ. ಇದರಿಂದ ಹರಳು ರೂಪದ ಯೂರಿಯಾ ಬಳಕೆಯನ್ನು ಶೇ.50ರಷ್ಟು ಕಡಿಮೆ ಮಾಡಬಹುದಾಗಿದೆ.

ಆದ್ದರಿಂದ ಹರಳು ರೂಪದ ಯೂರಿಯಾ ರಸಗೊಬ್ಬರದ ಬದಲಾಗಿ ದ್ರವರೂಪದ ನ್ಯಾನೋ ಯೂರಿಯಾ ಬಳಸುವುದರಿಂದ ಉತ್ಪಾದನಾ ವೆಚ್ಚ ಕಡಿಮೆಯಾಗುತ್ತದೆ. ನ್ಯಾನೋ ಯೂರಿಯಾವನ್ನು ಪ್ರತಿ ಲೀಟರ ನೀರಿಗೆ 3–4 ಎಮ್.ಎಲ್. ಮಿಶ್ರಣ ಮಾಡಿ ಮೊಳಕೆಯೊಡೆದ 30–35 ದಿನಗಳಿಗೊಮ್ಮೆ ಹಾಗೂ 45–50 ದಿನಗಳಿಗೊಮ್ಮೆ ಸಿಂಪರಣೆ ಮಾಡಬೇಕೆಂದು ಜಂಟಿ ಕೃಷಿ ನಿರ್ದೇಶಕರು ಜಿಲ್ಲೆಯ ರೈತ ಬಾಂಧವರಲ್ಲಿ ವಿನಂತಿಸಿದ್ದಾರೆ.

### ದೊಡ್ಡತಾಂಡೆಯಲ್ಲಿ ಡೆಂಗ್ಯೂ ವಿರೋಧಿ ಮಾಸಾಚರಣೆ ಅಡ್ವೋಕೇಸಿ ಸಭೆ

# ಆರೋಗ್ಯ ಇಲಾಖೆಯ ಮಾಹಿತಿಗಳನ್ನು ಪಾಲಿಸಿ

■ ವಿಜಯಸಾಕ್ಷಿ ಸುದ್ದಿ, ಗದಗ

ಡೆಂಗ್ಯೂ, ಚಿಕುಂಗುನ್ಯ ರೋಗವು ಈಡಿಸ್ ಇಜಿಪ್ಟೆ ಸೊಳ್ಳೆಯ ಕಚ್ಚುವಿಕೆಯಿಂದ ಒಬ್ಬರಿಂದ ಒಬ್ಬರಿಗೆ ಹರಡುತ್ತದೆ. ಸಂಗ್ರಹಿಸಿದ ನೀರನ ತೊಟ್ಟಿಯಲ್ಲಿ, ತ್ಯಾಜ್ಯದಲ್ಲಿ ಲಾರ್ವಾ ಬೆಳೆಯುತ್ತವೆ. ಈ ನಿಟ್ಟಿನಲ್ಲಿ ಆರೋಗ್ಯ ಇಲಾಖೆಯ ಮಾಹಿತಿಗಳನ್ನು ಪಾಲಿಸಿ, ಡೆಂಗೀ ತಡೆಗಟ್ಟಬೇಕೆಂದು ಆರೋಗ್ಯ ನಿರೀಕ್ಷಣಾಧಿಕಾರಿ ಸಿದ್ದಪ್ಪ ಎನ್.ಲಿಂಗದಾಳ ಹೇಳಿದರು.



ಅವರು ಕರ್ನಾಟಕ ಸರ್ಕಾರ, ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ರೋಗವಾಹಕ ಆಶ್ರಿತ ರೋಗಗಳ ನಿಯಂತ್ರಣಾಧಿಕಾರಿಗಳ ಮತ್ತು ತಾಲೂಕಾ ಆರೋಗ್ಯಾಧಿಕಾರಿಗಳ ಕಾರ್ಯಾಲಯ ಗದಗ, ಪ್ರಾಥಮಿಕ ಆರೋಗ್ಯ ಕೇಂದ್ರ ಲಕ್ಕುಂಡಿ, ಆಯುಷ್ಮಾನ್ ಆರೋಗ್ಯ ಮಂದಿರ ಅಡವಿಸೋಮಾಪೂರ ಇವರುಗಳ ಸಂಯುಕ್ತಾಶ್ರಯದಲ್ಲಿ ದೊಡ್ಡತಾಂಡೆ (ಜಲಶಂಕರ ನಗರ–2) ಶ್ರೀಬಾಲಾಜಿ ದೇವಸ್ಥಾನದಲ್ಲಿ ಹಮ್ಮಿಕೊಂಡಿದ್ದ ಡೆಂಗ್ಯೂ ವಿರೋಧಿ ಮಾಸಾಚರಣೆ ಅಡ್ವೋಕೇಸಿ ಸಭೆಯಲ್ಲಿ ಮಾತನಾಡಿದರು.

ಯಾವುದೇ ರೀತಿಯ ಜ್ವರ ಇದ್ದರೆ ರಕ್ತ ಪರೀಕ್ಷೆ ಮಾಡಿಕೊಂಡು ಚಿಕಿತ್ಸೆ ಪಡೆಯಿರಿ. ಮನೆಯಲ್ಲಿ ನೀರು ತುಂಬಿರುವ ಪರಿಕರಗಳನ್ನು ವಾರಕ್ಕೊಮ್ಮೆ ಸ್ವಚ್ಛವಾಗಿ ತೊಳೆದು ಒಣಗಿಸಿ. ನೀರಿನ ಪರಿಕರಗಳನ್ನು ಮುಚ್ಚಿಡಿ. ಮನೆಯ ಕಿಡಕಿಗಳಿಗೆ ಜಾಲರಿಗಳನ್ನು ಬಳಸಬೇಕು ಮತ್ತು ಮಲಗುವಾಗ ಸೊಳ್ಳೆ ಪರದೆಗಳನ್ನು ಬಳಸಬೇಕು. ಡೆಂಗ್ಯೂ ಬಗ್ಗೆ ಭಯ ಬೇಡ, ಮುನ್ನೆಚ್ಚರಿಕೆಯಿರಲಿ ಎಂದರು.

ಆರೋಗ್ಯ ನಿರೀಕ್ಷಣಾಧಿಕಾರಿ ಮುತ್ತಪ್ಪ ಹಟ್ಟಿಮನಿ ಮಾತನಾಡಿ, ಡೆಂಗ್ಯೂ ಜ್ವರಕ್ಕೆ ನಿಖರವಾದ ಚಿಕಿತ್ಸೆ ಇಲ್ಲ. ರೋಗದ ಲಕ್ಷಣಗಳ ಆಧಾರದ ಮೇಲೆ ಚಿಕಿತ್ಸೆ ನೀಡಲಾಗುವುದು. ನಿಮ್ಮ ಮನೆ ಬಾಗಿಲಿಗೆ ಬರುವ ಆರೋಗ್ಯ ಸಿಬ್ಬಂದಿಗಳಲ್ಲಿ ಅಥವಾ ಆಶಾ ಕಾರ್ಯಕರ್ತೆಯರಲ್ಲಿ ರಕ್ತ ಪರೀಕ್ಷೆ ಮಾಡಿಸಿಕೊಳ್ಳಿರಿ ಎಂದು ಹೇಳಿದರು.

ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ವಾಯ್.ಎಸ್. ಕಡೇಮನಿ ಮಾತನಾಡಿ, ಡೆಂಗ್ಯೂ ರೋಗ ಬರದ ಹಾಗೆ ಮುನ್ನೆಚ್ಚರಿಕೆ ಕ್ರಮ ಕೈಗೊಳ್ಳಬೇಕೆಂದು ತಿಳಿಸಿದರು. ಪ್ರಾಥಮಿಕ ಆರೋಗ್ಯ ಸುರಕ್ಷಾಧಿಕಾರಿ ಸವಿತಾ ಪವಾರ ಮಾತನಾಡಿದರು. ಕಾರ್ಯಕ್ರಮದಲ್ಲಿ ಗ್ರಾ.ಪಂ ಮಾಜಿ ಉಪಾಧ್ಯಕ್ಷ ಅನಿಲ ಕಾರಬಾರಿ, ತಾಂಡೆಯ ಹಿರಿಯರು, ಆಶಾ ಕಾರ್ಯಕರ್ತೆಯರು ಉಪಸ್ಥಿತರಿದ್ದರು. ಲಲಿತಾ ಅಂಗಡಿ ಸ್ವಾಗತಿಸಿದರು. ಲಕ್ಷ್ಮೀ ಪೂಜಾರ ನಿರೂಪಿಸಿದರು, ಮಂಜುಳಾ ಆರಿ ವಂದಿಸಿದರು.

### ಕದಳಿಶ್ರೀ ವೇದಿಕೆಯಿಂದ ಅಮೃತ ಭೋಜನ ಜ್ಞಾನ ಸಿಂಚನ ಕಾರ್ಯಕ್ರಮ

# ವಿದ್ಯಾರ್ಥಿಗಳಲ್ಲಿ ಸ್ಪರ್ಧಾತ್ಮಕ ಪೈಪೋಟಿ ಬೆಳೆಯಲಿ



ಅಧ್ಯಕ್ಷತೆ ವಹಿಸಿದ್ದ ಶಾಲಾ ಮುಖ್ಯೋಪಾಧ್ಯಾಯೆ ಭಾರತಿ ಕುಲಕರ್ಣಿ ಮಾತನಾಡಿ, ಸರ್ಕಾರಿ ಶಾಲೆಯ ಮಕ್ಕಳು ಪ್ರತಿಭಾನ್ವಿತರು. ಶಿಕ್ಷಕ ಸಮುದಾಯದೊಂದಿಗೆ ಆತ್ಮೀಯ ಸಂಬಂಧ ಹೊಂದಿ ತಾಯಿ–ಮಕ್ಕಳ ಬಾಂಧವ್ಯದೊಂದಿಗೆ ಇಲ್ಲಿ ಕಲಿಕೆಯಲ್ಲಿ ತೆ–ೂಡಗುತ್ತಾರೆ. ಶಾಲೆಯು ಕುಟುಂಬದ ಪರಿಸರ ನಿರ್ಮಾಣದಲ್ಲಿ ಕಾರ್ಯನಿರ್ವಹಿಸುತ್ತದೆ ಎಂದರು.

■ ವಿಜಯಸಾಕ್ಷಿ ಸುದ್ದಿ, ಗದಗ

ಇಂದಿನ ಸ್ಪರ್ಧಾತ್ಮಕ ತಂತ್ರಜ್ಞಾನ ಯುಗದಲ್ಲಿ ನಮ್ಮ ಮಕ್ಕಳು ಸ್ಪರ್ಧಾತ್ಮಕ ಪೈಪೋಟಿಯನ್ನು ಸಮರ್ಥವಾಗಿ, ಸರಳವಾಗಿ, ನಾನು ಎದುರಿಸಬಲ್ಲೆ ಎಂಬ ದೃಢ ಆತ್ಮವಿಶ್ವಾಸವನ್ನು ತಮ್ಮಲ್ಲಿ ಮೂಡಿಸಿಕೊಂಡು ಶೈಕ್ಷಣಿಕವಾಗಿ ಅಭಿವೃದ್ಧಿ ಹೊಂದಬೇಕೆಂದು ಸಾಹಿತಿ ಪದ್ಮಾ ಕಬಾಡಿ ಹೇಳಿದರು.

ಗದಗ ಜಿಲ್ಲಾ ಕದಳಿಶ್ರೀ ವೇದಿಕೆಯಿಂದ ಶ್ರಾವಣ ಮಾಸದ ಅಂಗವಾಗಿ ಗದುಗಿನ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆ ನಂ. 11ರಲ್ಲಿ ಜರುಗಿದ ಅಮೃತ ಭೋಜನ ಜ್ಞಾನ ಸಿಂಚನ ಕಾರ್ಯಕ್ರಮ ಮಾಲಿಕೆಯಲ್ಲಿ ಮಕ್ಕಳಿಗೆ ಸಿಹಿ ಭೋಜನ ವಿತರಿಸಿ ಮಾತನಾಡಿದರು.

ಮುಖ್ಯ ಅತಿಥಿಯಾಗಿ ಆಗಮಿಸಿದ್ದ ನಾಗಪ್ಪ ತಂಬ್ರಳ್ಳಿ ಮಾತನಾಡಿ, ಶ್ರಾವಣ ಮಾಸದಲ್ಲಿ ಕದಳಿಶ್ರೀ ವೇದಿಕೆಯಿಂದ ಸರಕಾರಿ ಶಾಲೆಗಳಲ್ಲಿ ಹಮ್ಮಿಕೊಳ್ಳುವ ಅಮೃತಭೋಜನ ಜ್ಞಾನ ಸಿಂಚನ ಕಾರ್ಯಕ್ರಮವು ಅರ್ಥಪೂರ್ಣವಾಗಿದೆ. ಸರ್ಕಾರಿ ಶಾಲೆಗಳು ಮಕ್ಕಳಲ್ಲಿ ಬದುಕುವ ಉನ್ನತ ಧ್ಯೇಯದ ಮೆಟ್ಟಿಲುಗಳನ್ನು ತಿಳಿಸಿಕೊಡುತ್ತವೆ ಎಂದರು.

ಡಾ. ಮಹಾಂತೇಶ ಸಜ್ಜನರ ಕಲಿಕಾ ಸಾಮಗ್ರಿಗಳನ್ನು ವಿತರಿಸಿ ಮಾತನಾಡಿ, ಮಕ್ಕಳು ಹಿರಿಯರ, ಶರಣರ ನುಡಿ ಹಾಗೂ ವಚನಗಳನ್ನು ಓದು–ಬರಹದಲ್ಲಿ ರೂಡಿಸಿಕೊಂಡರೆ ಬದುಕು ಸುಂದರವಾಗುತ್ತದೆ ಎಂದರು. ಸಂಪನ್ಮೂಲ ವ್ಯಕ್ತಿ ಕವಿತಾ ಬೇಲೇರಿ ಮಾತನಾಡಿ, ನಮ್ಮ ಮನಸ್ಸು ಎಂಬುದು ಒಂದು ಸುಂದರ ಉದ್ಯಾನವನದಂತೆ ಉತ್ತಮವಾದ ಸದ್ವಿಚಾರಗಳೇ ಬೀಜಗಳಾಗಿವೆ. ಇಲ್ಲಿ ಹೂವು ಬೆಳೆಯಬೇಕೊ ಕಸ ಬೆಳೆಯಬೇಕೋ ಎಂಬುದನ್ನು ನಾವೇ ನಿರ್ಧರಿಸಬೇಕು ಎಂದರು.

ಆರಾಧ್ಯ ವೆಂಕಟಗಿರಿ, ನಿವೇದಿತಾ ಕಣವಿ ಪ್ರಾರ್ಥಿಸಿದರು. ಶ್ರೀನಿವಾಸ ಕಮ್ಮಾರ, ರಾಧಿಕಾ ಮಡಿವಾಳರ, ತನುಶ್ರೀ ಹಡಪದ ಶರಣರ ವಚನಗಳನ್ನು ಹಾಡಿದರು. ರೇಣುಕಾ ಹೊಸಮನಿ ಸ್ವಾಗತಿಸಿ ನಿರೂಪಿಸಿದರು. ಮಂಜುಳಾ ಕೊಳ್ಳಿಯವರ ವಂದಿಸಿರು. ಕಾರ್ಯಕ್ರಮದ ಪ್ರಾಯೋಜಕರಾದ ಪದ್ಮಾ ಕಬಾಡಿ, ಡಾ. ಮಹಾಂತೇಶ ಸಜ್ಜನರ ಅವರನ್ನು ಕದಳಿಶ್ರೀ ವೇದಿಕೆಯಿಂದ ಸನ್ಮಾನಿಸಿ ಗೌರವಿಸಲಾಯಿತು.

## ಕೆಎಸ್‌ಆರ್‌ಟಿಸಿ ಘಟಕಗಳಿಗೆ ಪ್ರಿಯಾಂಗಾ ಎಂ ಭೇಟಿ



■ ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ

ವಾಯವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯ ವ್ಯವಸ್ಥಾಪಕ ನಿರ್ದೇಶಕರಾದ ಪ್ರಿಯಾಂಗಾ ಎಂ ಅವರು ಕಾರವಾರ ಹಾಗೂ ಆಂಕೋಲಾ ಘಟಕಗಳಿಗೆ ಮತ್ತು ಗೋಕರ್ಣ ಬಸ್ ನಿಲ್ದಾಣಕ್ಕೆ ಭೇಟಿ ನೀಡಿದರು.

ಈ ಸಂದರ್ಭದಲ್ಲಿ ಬಸ್ ನಿಲ್ದಾಣದ ಸುತ್ತಮುತ್ತಲಿನ ಸಂಪೂರ್ಣ ಸ್ವಚ್ಛತೆ ಹಾಗೂ ನಿಯಮಿತ ನಿರ್ವಹಣೆಗೆ ತಕ್ಷಣ ಸೂಕ್ತ ಕ್ರಮ ಕೈಗೊಳ್ಳಬೇಕು. ಎಲ್ಲಾ ಅಂತಾರಾಜ್ಯ ಬಸ್‌ಗಳು ಸಮಯ ಪಾಲಿತವಾಗಿ ಹಾಗೂ ನಿರಂತರವಾಗಿ ಚಲಾಯಿಸುವಂತೆ ಸಮರ್ಪಕ ವ್ಯವಸ್ಥೆ ಕಲ್ಪಿಸಬೇಕು. ಎಲ್ಲಾ ಬಸ್‌ಗಳನ್ನು ನಿರಂತರವಾಗಿ ತಾಂತ್ರಿಕ ನಿರ್ವಹಣೆಗೆ ಒಳಪಡಿಸಿ, ಅಗತ್ಯ ಸೇವೆ ಹಾಗೂ ತಾತ್ಕಾಲಿಕ ದುರಸ್ತಿಗಳನ್ನು ತ್ವರಿತವಾಗಿ ಪೂರ್ಣಗೊಳಿಸಬೇಕು. ಬಸ್‌ಗಳಲ್ಲಿ ರೂಫ್ ಲೀಕೇಜ್ ಇದ್ದರೆ ಅವುಗಳನ್ನು ಪರಿಶೀಲಿಸಿ ಶೀಘ್ರದಲ್ಲೇ ದುರಸ್ತಿ ಮಾಡಬೇಕು. ಇತರೆ ತಾಂತ್ರಿಕ ದೋಷಗಳು ಮತ್ತು ನಿರ್ವಹಣಾ ಸಮಸ್ಯೆಗಳಿಗೆ ಕೂಡ ತಕ್ಷಣ ಪರಿಹಾರ ಒದಗಿಸಬೇಕೆಂದು ಅಧಿಕಾರಿಗಳಿಗೆ ಸೂಚಿಸಿದರು.

ಈ ಸಂದರ್ಭದಲ್ಲಿ ಶಿರಸಿ ವಿಭಾಗೀಯ ನಿಯಂತ್ರಣಾಧಿಕಾರಿ ಬಸವರಾಜ ಅಮ್ಮನವರ, ಅಧಿಕಾರಿಗಳಾದ ಆರ್.ಎಲ್. ಕುಮಾರಸ್ವಾಮಿ, ವಿನೋದ ನಾಯಕ್, ರವಿ ಅಂಚಗಾವಿ ಹಾಗೂ ಘಟಕ ವ್ಯವಸ್ಥಾಪಕರು ಉಪಸ್ಥಿತರಿದ್ದರು.

## ವ್ಯಸನ ಮುಕ್ತ ಸಮಾಜ ನಿರ್ಮಾಣಕ್ಕೆ ಕೈಜೋಡಿಸಿ

▸▸ ಮೊದಲನೇ ಪುಟದಿಂದ

ಹಾಗಾಗಿ ಒಳ್ಳೆಯ ಅಭ್ಯಾಸಗಳನ್ನು ರೂಢಿಸಿಕೊಂಡು ಜೀವನದಲ್ಲಿ ಸಫಲರಾಗಬೇಕೆಂದು ವಿವರಿಸಿದರು.

ಈ ಸಂದರ್ಭದಲ್ಲಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ್ ಬಬರ್ಚಿ, ತಾಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಅಶೋಕ ಮಂದಾಲಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರೋಹನ ಜಗದೀಶ, ಉಪವಿಭಾಗಾಧಿಕಾರಿ ಗಂಗಪ್ಪ ಎಂ, ತಹಸೀಲ್ದಾರ ಶ್ರೀನಿವಾಸ ಮೂರ್ತಿ ಕುಲಕರ್ಣಿ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ. ಎಸ್.ಎಸ್. ನೀಲಗುಂದ, ಸರ್ಕಾರಿ ನೌಕರರ ಸಂಘದ ಜಿಲ್ಲಾಧ್ಯಕ್ಷ ಬಸವರಾಜ ಬಳ್ಳಾರಿ, ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕಿ ನಂದಾ ಹಣಬರಟ್ಟಿ, ಶಿಕ್ಷಣ ಇಲಾಖೆಯ ಜಿಲ್ಲಾ ಉಪ ಸಮನ್ವಯಾಧಿಕಾರಿ ಎಂ.ಎಚ್. ಕಾಂಬಳಿ, ವಾರ್ತಾಧಿಕಾರಿ ವಸಂತ ಮಡ್ಲೂರ, ವಿವಿಧ ಇಲಾಖೆಯ ಅಧಿಕಾರಿಗಳು, ಪ್ರೌಢಶಾಲಾ ಶಿಕ್ಷಕ ವೃಂದ, ವಿದ್ಯಾರ್ಥಿಗಳು ಹಾಜರಿದ್ದರು. ಪ್ರೊ. ಬಾಹುಬಲಿ ಜೈನರ ಕಾರ್ಯಕ್ರಮ ನಿರ್ವಹಿಸಿದರು.

## ಶ್ರೀ ರಾಘವೇಂದ್ರ ಸ್ವಾಮಿಗಳ ಸನ್ನಿಧಿಯಲ್ಲಿ ಆ. 10ರಿಂದ ಆರಾಧನಾ ಮಹೋತ್ಸವ


▸▸ ಮೊದಲನೇ ಪುಟದಿಂದ

ಆ. 12ರ ಸಂಜೆ 6.30ಕ್ಕೆ ಉತ್ತರಾರಾಧನೆ ನಿಮಿತ್ತ ಹುಬ್ಬಳ್ಳಿಯ ವೈಷ್ಣವಿ ಕುಲಕರ್ಣಿ ಇವರಿಂದ ಭರತನಾಟ್ಯ ಕಾರ್ಯಕ್ರಮ ಜರುಗುವುದು. ಪ್ರತಿದಿನ ರಾತ್ರಿ 8 ಗಂಟೆಗೆ ಪಾಲಕಿ ಸೇವೆ, ರಥೋತ್ಸವ, ಅಷ್ಟಾವಧಾನ ಸೇವೆ, ತೊಟ್ಟಿಲು ಪೂಜೆ, ಫಲಮಂತ್ರಾಕ್ಷತೆ ಹಾಗೂ ಪ್ರಸಾದ ವಿತರಣೆ ಜರುಗಲಿದೆ ಎಂದು ಶ್ರೀಗುರು ರಾಘವೇಂದ್ರ ಸೇವಾ ಸಮಿತಿ ಪ್ರಕಟಣೆ ತಿಳಿಸಿದೆ.

# ಎನ್.ಪಿ.ಕೆ ಆಗ್ರೋ ಕೇಂದ್ರದ ಪರವಾನಿಗೆ ಅಮಾನತು

■ ವಿಜಯಸಾಕ್ಷಿ ಸುದ್ದಿ, ಡಂಬಳ

ಮುಂಡರಗಿ ನಗರದಲ್ಲಿ ಯೂರಿಯಾ ರಸಗೊಬ್ಬರವನ್ನು ಪಾಯಿಂಟ್ ಆಫ್ ಸೇಲ್ ಮೂಲಕ ಮಾರಾಟ ಮಾಡದೆ ನಿಗದಿಪಡಿಸಿದ ನಮೂನೆಯಲ್ಲಿ ನಗದು ಅಥವಾ ಸಾಲದ ಬಿಲ್ಲನ್ನು ನೀಡಲು ನಿರಾಕರಿಸುತ್ತಿರುವ ಕುರಿತು ಅನಿರೀಕ್ಷಿತವಾಗಿ ಮುಂಡರಗಿ ತಾಲೂಕಿನ ಎನ್.ಪಿ.ಕೆ ಆಗ್ರೋ ಕೇಂದ್ರದ ಕೃಷಿ ಪರಿಕರ ಮಾರಾಟ ಮಳಿಗೆಗೆ ಮುಂಡರಗಿ ತಾಲೂಕಿನ ತಹಸೀಲ್ದಾರರು, ಪೊಲೀಸ್ ಇಲಾಖೆ ಅಧಿಕಾರಿಗಳು ಹಾಗೂ ಕೃಷಿ ಇಲಾಖೆಯ ಅಧಿಕಾರಿಗಳು ಜಂಟಿಯಾಗಿ ಭೇಟಿ ನೀಡಿ ಪರಿಶೀಲಿಸಿ, ರಸಗೊಬ್ಬರ ನಿಯಂತ್ರಣ ಆದೇಶ 1985ನ್ನು ಉಲ್ಲಂಘನೆ ಮಾಡಿರುವುದನ್ನು ಪತ್ತೆ ಮಾಡಿದ್ದಾರೆ.



ಈ ವೇಳೆ, ಮಾರಾಟ ಮಳಿಗೆಯಲ್ಲಿ ಭೌತಿಕವಾಗಿ ಲಭ್ಯವಿರುವ ರಸಗೊಬ್ಬರ ದಾಸ್ತಾನಿಗೂ ಹಾಗೂ ಪಿ.ಓ.ಎಸ್. ಮಶಿನ್‌ನಲ್ಲಿರುವ ರಸಗೊಬ್ಬರ ದಾಸ್ತಾನಿಗೂ ವ್ಯತ್ಯಾಸ ಕಂಡುಬಂದಿದೆ. ಪ್ರತಿ ಚಿಲ್ಲರೆ ಮಾರಾಟಗಾರನು ತಾನು ಮಾರಾಟ ಮಾಡುವ ವಿವಿಧ ರಸಗೊಬ್ಬರಗಳ ಆ ದಿನದ ಆರಂಭಿಕ ದಾಸ್ತಾನು ಪ್ರಮಾಣ ಮತ್ತು ನಿಗದಿಪಡಿಸಿದ ದರದ ವಿವರಗಳನ್ನು ತಮ್ಮ ಮಾರಾಟ ಮಳಿಗೆಯಲ್ಲಿ ಸಾರ್ವಜನಿಕರಿಗೆ ಎದ್ದು ಕಾಣುವಂತೆ ಪ್ರಮುಖ ಜಾಗದಲ್ಲಿ ಪ್ರದರ್ಶಿಸದೆ ಇರುವುದು, ನಿಗದಿಪಡಿಸಿದ ನಮೂನೆ ಎಮ್‌ನಲ್ಲಿ ನಗದು ಅಥವಾ ಸಾಲದ ಬಿಲ್ಲನ್ನು ನೀಡದೇ ಇರುವುದು, ಪಾರಂ ಓನಲ್ಲಿ ನಮೂದಿಸದೆ ಇರುವ ರಸಗೊಬ್ಬರಗಳನ್ನು ದಾಸ್ತಾನು ಮಾಡಿರುವುದನ್ನು ಗಮನಿಸಿ, ಮಳಿಗೆಯ ಚಿಲ್ಲರೆ ರಸಗೊಬ್ಬರ ಮಾರಾಟ ಪರವಾನಿಗೆಯನ್ನು 15 ದಿನಗಳವರೆಗೆ ಅಮಾನತ್ತಿನಲ್ಲಿಡಲಾಗಿದೆ.

ಕೃಷಿ ಇಲಾಖೆಯ ಕೃಷಿ ಪರಿಕರ ಪರಿವೀಕ್ಷಕರು ಮುಂಡರಗಿ ತಾಲೂಕಿನ ಎಲ್ಲಾ ಕೃಷಿ ಪರಿಕರ ಮಾರಾಟ ಮಳಿಗೆಗಳಿಗೆ ಬೇಟಿ ನೀಡುತ್ತಿದ್ದು, ಕೃಷಿ ಪರಿಕರಗಳನ್ನು ನಿಯಮ ಬಾಹಿರವಾಗಿ ಮಾರಾಟ ಮಾಡಿದಲ್ಲಿ ನಿಯಮಾನುಸಾರ ಕ್ರಮ ಕೈಗೊಳ್ಳಲಾಗುವುದು ಎಂದು ತಹಸೀಲ್ದಾರ ಎರಿಸ್ವಾಮಿ ಪಿ.ಎಸ್, ಮುಂಡರಗಿ ಸಹಾಯಕ ಕೃಷಿ ನಿರ್ದೇಶಕ ಪ್ರಾಣೇಶ್, ಸಿಪಿಐ ಮಂಜುನಾಥ ಕುಸಗಲ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸಾಯಿಬಾಬಾ ಮಂದಿರ ಲೋಕಾರ್ಪಣೆ ನಾಳೆ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ
ಸಮೀಪದ ಅಡರಕಟ್ಟಿ ಗ್ರಾಮದ ಈಶ್ವರ ನಗರದಲ್ಲಿ ನಿರ್ಮಾಣಗೊಂಡ ನೂತನ ಸಾಯಿಬಾಬಾ ಮಂದಿರ ಲೋಕಾರ್ಪಣೆ, ಮೂರ್ತಿ ಪ್ರತಿಷ್ಠಾಪನೆ ಆ.3ರಂದು ಬೆಳಿಗ್ಗೆ 10.30ಕ್ಕೆ ನೆರವೇರಲಿದೆ.

ಈ ಕುರಿತು ಮಾಹಿತಿ ನೀಡಿದ ಶ್ರೀಸಾಯಿ ಆರಾಧಕ ಮುತ್ತುಸ್ವಾಮಿ ಪೂಜಾರ, ಸಾಯಿನಾಥ ದೇವಸ್ಥಾನ ಲೋಕಾರ್ಪಣೆ ಹಿನ್ನೆಲೆಯಲ್ಲಿ ಶನಿವಾರದಿಂದಲೇ ದೇವಸ್ಥಾನದಲ್ಲಿ ಹೋಮ-ಹವನ, ಪೂಜೆ ವಿವಿಧ ಧಾರ್ಮಿಕ ಕಾರ್ಯಕ್ರಮಗಳು ನಡೆಯಲಿವೆ. ಗಣ್ಯಮಾನ್ಯರು, ಗುರು-ಹಿರಿಯರು, ಭಕ್ತರು ಪಾಲ್ಗೊಳ್ಳುವರು. ಬೇಡಿ ಬಂದ ಭಕ್ತರ ಇಷ್ಟಾರ್ಥಗಳನ್ನು ಸಿದ್ಧಿಸುವ ಮತ್ತು ಭಕ್ತರ ಕಷ್ಟ-ಕಾರ್ಪಣ್ಯಗಳನ್ನು ದೂರ ಮಾಡುವ ಕರುಣಾಸಾಗರ ಶ್ರೀ ಸಾಯಿನಾಥರ ದೇವಸ್ಥಾನ ಲೋಕಾರ್ಪಣೆ ಕಾರ್ಯಕ್ರಮದಲ್ಲಿ ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಕೃತಾರ್ಥರಾಗಬೇಕೆಂದು ತಿಳಿಸಿದರು.

ಮಾತೋಶ್ರೀ ಬಸಮ್ಮ ಎಸ್ ಪಾಟೀಲರ 21ನೇ ಪುಣ್ಯಸ್ಮರಣೆ ಕಾರ್ಯಕ್ರಮದಲ್ಲಿ ಸರಕಾರದ ವಿಶ್ರಾಂತ ಮುಖ್ಯ ಕಾರ್ಯದರ್ಶಿ ಬಿ.ಎಸ್. ಪಾಟೀಲ

# ಅಭಿವೃದ್ಧಿಯ ಉದ್ದೇಶದಿಂದ ಬೆಂಗಳೂರು ವಿಂಗಡನೆ

■ವಿಜಯಸಾಕ್ಷಿ ಸುದ್ದಿ, ರೋಣ
1970ರಲ್ಲಿ ಬೆಂಗಳೂರಿನ ಜನಸಂಖ್ಯೆ 26 ಲಕ್ಷ ಮಾತ್ರ. ಆದರೆ, 2025ರಷ್ಟರಲ್ಲಿ 1 ಕೋಟಿ 40 ಲಕ್ಷ ಜನರು ಬ್ರ್ಯಾಂಡ್ ಬೆಂಗಳೂರಿನಲ್ಲಿ ವಾಸವಾಗಿದ್ದು, ಅಭಿವೃದ್ಧಿ ಮತ್ತು ಜನರಿಗೆ ಸರಕಾರದ ಯೋಜನೆಗಳನ್ನು ತಲುಪಿಸುವ ನಿಟ್ಟಿನಲ್ಲಿ ಐದು ಭಾಗಗಳಾಗಿ ವಿಂಗಡಿಸಲಾಗಿದೆ ಎಂದು ರಾಜ್ಯ ಸರಕಾರದ ವಿಶ್ರಾಂತ ಮುಖ್ಯ ಕಾರ್ಯದರ್ಶಿಗಳು, ಬೆಂಗಳೂರು ಕ್ಷೇತ್ರ ವಿಂಗಡನೆ ಸಮಿತಿ ಅಧ್ಯಕ್ಷರು, ನಾಡಪ್ರಭು ಕೆಂಪೇಗೌಡ ಪ್ರಶಸ್ತಿ ಪುರಸ್ಕೃತ ಬಿ.ಎಸ್. ಪಾಟೀಲ ಹೇಳಿದರು.

ಅವರು ಶನಿವಾರ ಆರ್‌ಜಿಎಸ್ ಶಿಕ್ಷಣ ಸಂಸ್ಥೆಯ ಆವರಣದಲ್ಲಿ ಜರುಗಿದ ಮಾತೋಶ್ರೀ ಬಸಮ್ಮ ಎಸ್ ಪಾಟೀಲರ 21ನೇ ಪುಣ್ಯಸ್ಮರಣೆ ನಿಮಿತ್ತ ಸ್ಮರಣೋತ್ಸವ ಸಮಿತಿಯವರು ಹಮ್ಮಿಕೊಂಡಿದ್ದ ಸಮಾರಂಭದಲ್ಲಿ ಸನ್ಮಾನ ಸ್ವೀಕರಿಸಿ ಮಾತನಾಡಿದರು.



ಬೃಹತ್ ಬೆಂಗಳೂರನ್ನು ಅಭಿವೃದ್ಧಿಯ ದೃಷ್ಟಿಯಿಂದ ವಿಂಗಡನೆ ಮಾಡಲಾಗಿದೆಯೇ ಹೊರತು ಬೇರಾವುದೇ ಉದ್ದೇಶವಿಲ್ಲ. ವಿಂಗಡನೆಗೂ ಮೊದಲು ಬಿಬಿಎಂಪಿಗೆ ಬರುತ್ತಿದ್ದ ತೆರಿಗೆ ರೂಪದ ಹಣ ಕೇವಲ 330 ಕೋಟಿ ಮಾತ್ರ. ವಿಪರ್ಯಾಸವೆಂದರೆ, ವಿಂಗಡನೆಯಾದ ಮೇಲೆ ಬರುವ ಆದಾಯ ಅಂದಾಜು 8 ಸಾವಿರ ಕೋಟಿ ದಾಟಲಿದ್ದು, ಇದರಿಂದ ನಗರವಾಸಿಗಳ ಸಮಸ್ಯೆಗಳನ್ನು ನಿವಾರಿಸುವ ಮೂಲಕ ಬೆಂಗಳೂರನ್ನು ಜನರು ಇಚ್ಛಿಸಿದಂತೆಯೇ ಅಭಿವೃದ್ಧಿಪಡಿಸಬಹುದು ಎಂದರು.

ಈ ಮೊದಲು ಗ್ರಾಮೀಣ ಭಾಗಗಳಲ್ಲಿ ಶೇ. 72ರಷ್ಟು ಜನರು ವಾಸಿಸುತ್ತಿದ್ದರು. ಬದಲಾದ ಕಾಲದಲ್ಲಿ ಶೇ. 40ರಷ್ಟು ಗ್ರಾಮೀಣ ಭಾಗಗಳಲ್ಲಿ, ಶೇ. 60ರಷ್ಟು ಜನರು ನಗರ ಪ್ರದೇಶಗಳಲ್ಲಿ ವಾಸ ಮಾಡುತ್ತಿರುವುದು ಕಂಡುಬರುತ್ತಿದೆ. ಬೃಹತ್ ಬೆಂಗಳೂರು ವಿಂಗಡನೆ ಸಮಿತಿಯಲ್ಲಿ ಉನ್ನತ ಅಧಿಕಾರಿಗಳಿದ್ದು, ಅವರ ಸಹಯೋಗದಲ್ಲಿ ವಾಸ ಮಾಡುವ ಜನರಿಗೆ ತೊಂದರೆಯಾಗದಂತೆ ವರದಿ ತಯಾರಿಸಿ ಸರಕಾರಕ್ಕೆ ನೀಡಲಾಗಿದೆ. ಅದೇ ಮಾದರಿಯಲ್ಲಿ ಸರಕಾರ ಚುನಾವಣೆಯನ್ನೂ ನಡೆಸಲಿದೆ ಎಂದರು.

> ಮಾತೋಶ್ರೀ ಬಸಮ್ಮ ಎಸ್.ಪಾಟೀಲರ ಪುಣ್ಯಸ್ಮರಣೆ ನಿಮಿತ್ತ ಸಮಾಜಮುಖಿ ಕಾರ್ಯಗಳನ್ನು ಹಮ್ಮಿಕೊಂಡು ಬಡವರಿಗೆ ಸಹಾಯಹಸ್ತ ಚಾಚುತ್ತಿರುವುದು ಸ್ವಾಗತಾರ್ಹ. ಸತತ 21 ವರ್ಷಗಳಿಂದ ಹಮ್ಮಿಕೊಂಡ ಉಚಿತ ನೇತ್ರ ತಪಾಸಣೆ ಕಾರ್ಯದಿಂದ 3 ಸಾವಿರಕ್ಕೂ ಹೆಚ್ಚು ಜನರಿಗೆ ಅನುಕೂಲವಾಗಿದೆ.
> – ಎನ್.ಎಚ್. ಕೋನರೆಡ್ಡಿ.
> ಶಾಸಕರು, ನವಲಗುಂದ.

ಹಾಲಕೇರಿ ಅನ್ನದಾನ ಶ್ರೀಗಳು, ಕುದರಿಮೋತಿ ಶ್ರೀಮಠದ ವಿಜಯಮಹಾಂತ ಶ್ರೀಗಳು, ರೋಣದ ಗುರುಪಾದ ಶ್ರೀಗಳು, ಮಾಗಡಿ ಮಠದ ಶಿವಮೂರ್ತಿ ಶ್ರೀಗಳು, ಶಾಖಾ ಶಿವಯೋಗ ಮಂದಿರದ ಸಿದ್ದರಾಮ ಶ್ರೀಗಳು ಸೇರಿದಂತೆ ವಿವಿಧ ಮಠಾಧೀಶರು ಕಾರ್ಯಕ್ರಮದ ಸಾನ್ನಿಧ್ಯ ವಹಿಸಿದ್ದರು.

ಶಾಸಕರಾದ ಜಿ.ಎಸ್. ಪಾಟೀಲ, ಎನ್.ಎಚ್. ಕೋನರೆಡ್ಡಿ, ಐ.ಎಸ್. ಪಾಟೀಲ, ಮಾಜಿ ಸಚಿವ ಬಿ.ಆರ್. ಯಾವಗಲ್ಲ, ಮಾಜಿ ಸಂಸದರಾದ ಆರ್.ಎಸ್. ಪಾಟೀಲ, ಮಂಜುನಾಥ ಕುನ್ನೂರ, ಮಾಜಿ ಶಾಸಕರಾದ ರಾಮಕೃಷ್ಣ ದೊಡ್ಡಮನಿ, ರಾಮಣ್ಣ ಲಮಾಣಿ, ಅರಣ್ಯ ನಿಗಮದ ಮಾಜಿ ಅಧ್ಯಕ್ಷ ಟಿ.ಈಶ್ವರ ಸೇರಿದಂತೆ ಮುಖಂಡರು ಉಪಸ್ಥಿತರಿದ್ದರು.

## ಚುನಾವಣಾ ಆಯೋಗ ಬಿಜೆಪಿ ಪರ ಮತ ಕದಿಯುತ್ತಿದೆ: "ಮುಚ್ಚಿಡಲು ಆಗದ" ಪುರಾವೆಗಳಿವೆ ಎಂದ ರಾಹುಲ್ ಗಾಂಧಿ

■ವಿಜಯಸಾಕ್ಷಿ ಸುದ್ದಿ, ನವದೆಹಲಿ
ಕಾಂಗ್ರೆಸ್ ನಾಯಕ ಹಾಗೂ ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಅವರು ಇಂದು ಚುನಾವಣಾ ಆಯೋಗ (ಇಸಿ)ದ ವಿರುದ್ಧ ಅತ್ಯಂತ ಗಂಭೀರವಾದ ಆರೋಪಗಳನ್ನು ಮಾಡಿದ್ದಾರೆ. ಚುನಾವಣಾ ಆಯೋಗವು ಬಿಜೆಪಿ ಪರವಾಗಿ "ಮತ ಕಳ್ಳತನ" (vote chori) ಮಾಡುತ್ತಿದೆ ಎಂದು ನೇರವಾಗಿ ಆರೋಪಿಸಿದ ರಾಹುಲ್ ಗಾಂಧಿ, ಇದಕ್ಕೆ ತಮ್ಮ ಬಳಿ "ಮುಚ್ಚಿಡಲು ಆಗದ" (open and shut) ಪುರಾವೆಗಳಿವೆ ಎಂದು ಹೇಳಿದ್ದಾರೆ. ಈ ಪುರಾವೆಗಳನ್ನು ಅವರು "ಅಣುಬಾಂಬ್"ಗೆ ಹೋಲಿಸಿದ್ದು, ಅದು ಸ್ಫೋಟಗೊಂಡಾಗ ಚುನಾವಣಾ ಆಯೋಗಕ್ಕೆ ದೇಶದಲ್ಲಿ ತಲೆಮರೆಸಿಕೊಳ್ಳಲು ಕೂಡ ಜಾಗ ಇರುವುದಿಲ್ಲ ಎಂದು ಎಚ್ಚರಿಸಿದ್ದಾರೆ.

'ಶ್ರೀ ಜಗದ್ಗುರು ರೇಣುಕ ವಿಜಯ' ಪುರಾಣ ಪ್ರವಚನ ಸಮಾರಂಭದಲ್ಲಿ ರಂಭಾಪುರಿ ಶ್ರೀಗಳು

# ಅನುಭವದಿಂದ ಸಿಗುವ ಜ್ಞಾನ ಓದಿನಿಂದ ಸಿಗದು

■ವಿಜಯಸಾಕ್ಷಿ ಸುದ್ದಿ, ಬಾಳೆಹೊನ್ನೂರು
ಜೀವನದ ಕೆಲವು ಸಮಸ್ಯೆಗಳಿಗೆ ನಾವು ನಡೆದು ಬಂದ ದಾರಿ ಹಾಗೂ ತೆಗೆದುಕೊಂಡ ನಿರ್ಧಾರಗಳೇ ಕಾರಣವಾಗಿರುತ್ತವೆ. ಅನುಭವದಿಂದ ಸಿಗುವ ಜ್ಞಾನ ಸಂಪತ್ತು ಓದಿನಿಂದ ಸಿಗುವುದಿಲ್ಲವೆಂದು ಶ್ರೀ ರಂಭಾಪುರಿ ಡಾ.ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.



ಅವರು ಶ್ರೀ ಜಗದ್ಗುರು ರಂಭಾಪುರಿ ಪೀಠದಲ್ಲಿ ಕೈಗೊಂಡ 34ನೇ ವರ್ಷದ ತಪೋನುಷ್ಠಾನ ಹಾಗೂ 'ಶ್ರೀ ಜಗದ್ಗುರು ರೇಣುಕ ವಿಜಯ' ಪುರಾಣ ಪ್ರವಚನ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ಮಾನವೀಯತೆ ಎಂಬುದು ಆಕಾಶದಷ್ಟು ವಿಸ್ತಾರ. ಸಮುದ್ರದಷ್ಟೇ ವಿಶಾಲ. ಕೆಲವು ಹನಿಗಳು ಅಪವಿತ್ರಗೊಂಡರೆ ಸಮುದ್ರವೇ ಅಪವಿತ್ರವಾಗುವುದಿಲ್ಲ. ಸಂಕಷ್ಟಗಳನ್ನು ಎದುರಿಸಿದ ಮನುಷ್ಯ ಜೀವನದಲ್ಲಿ ಉನ್ನತಿ ಹೊಂದಲು ಸಾಧ್ಯ. ಗಾಢಾಂಧಕಾರದಲ್ಲಿ ಮುಳುಗಿದ ಮನುಷ್ಯನನ್ನು ಎಚ್ಚರಿಸಿ ಜಾಗೃತಿ ಉಂಟು ಮಾಡಿದ ಶ್ರೇಯಸ್ಸು ಶ್ರೀ ಜಗದ್ಗುರು ರೇಣುಕಾಚಾರ್ಯರಿಗೆ ಸಲ್ಲುತ್ತದೆ. ವೀರಶೈವ ಧರ್ಮ ಆದರ್ಶ ಮೌಲ್ಯಗಳನ್ನು ಉಳಿಸಿ ಬೆಳೆಸಿಕೊಂಡು ಬರುವುದರಲ್ಲಿ ಯಾವುದೇ ಅನುಮಾನವಿಲ್ಲವೆಂದರು.

ಶ್ರೀ ಜಗದ್ಗುರು ರೇಣುಕ ವಿಜಯ ಪುರಾಣ ಪ್ರವಚನದಲ್ಲಿ ನೆಗಳೂರು ಹಿರೇಮಠದ ಗುರುಶಾಂತೇಶ್ವರ ಶಿವಾಚಾರ್ಯ ಸ್ವಾಮಿಗಳು ಮಾತನಾಡಿ, ಹುಟ್ಟು-ಸಾವು ನಮ್ಮ ಕೈಯಲ್ಲಿ ಇಲ್ಲ. ಆದರೆ ಬದುಕು ಮಾತ್ರ ನಮ್ಮ ಕೈಯಲ್ಲಿದೆ. ನದಿ, ಸಮುದ್ರಗಳನ್ನು ಸೇತುವೆ ಮೂಲಕ, ಗುಡ್ಡ-ಬೆಟ್ಟಗಳನ್ನು ಸುರಂಗ ಮಾರ್ಗ ನಿರ್ಮಿಸಿ ದಾಟಬಹುದು. ಆದರೆ ಮನದ ಮಧ್ಯೆ ನಿರ್ಮಾಣಗೊಂಡ ಸ್ವಾರ್ಥದ ಗೋಡೆಗಳನ್ನು ದಾಟುವುದು ಸುಲಭದ ಕೆಲಸವಲ್ಲ ಎಂದರು.

ಸಮಾರಂಭದಲ್ಲಿ ಆಲಮೇಲ ಚಂದ್ರಶೇಖರ ಶಿವಾಚಾರ್ಯರು, ಹನುಮಾಪುರ ಡಾ. ಸೋಮಶೇಖರ ಶಿವಾಚಾರ್ಯರು, ಅಹಿರಸಂಗದ ಮಲ್ಲಿಕಾರ್ಜುನ ಶಿವಾಚಾರ್ಯರು, ತೊಗರ್ಸಿ ಮಳೆಮಠದ ಮಹಾಂತ ಶಿವಾಚಾರ್ಯರು, ನೀಲೂರು ಹಿರೇಮಠದ ಶಿವಬಸವ ಶಿವಾಚಾರ್ಯರು ಮತ್ತು ಹುಡುಗಿ ಹಿರೇಮಠದ ಸೋಮೇಶ್ವರ ಶಿವಾಚಾರ್ಯರು ಪಾಲ್ಗೊಂಡು ನುಡಿ ನಮನ ಸಲ್ಲಿಸಿದರು.

ಶ್ರೀ ಜಗದ್ಗುರು ರೇಣುಕಾಚಾರ್ಯ ಗುರುಕುಲ ಸಾಧಕರಿಂದ ವೇದಘೋಷ, ವಿಠಲಾಪುರ ಹಿರೇಮಠದ ಗಂಗಾಧರ ಸ್ವಾಮಿಗಳಿಂದ ಪ್ರಾರ್ಥನೆ ಜರುಗಿ-ತು. ಶಿಕ್ಷಕ ವೀರೇಶ ಕುಲಕರ್ಣಿ ನಿರೂಪಿಸಿದರು.

## ಸಂಸತ್ತಿನಲ್ಲಿ ವಿಪಕ್ಷಗಳ ಪ್ರತಿಭಟನೆ ತಡೆಯಲು ಸಿಐಎಸ್‌ಎಫ್ ನಿಯೋಜನೆ



■ವಿಜಯಸಾಕ್ಷಿ ಸುದ್ದಿ, ಹೊಸದಿಲ್ಲಿ
ಸಂಸತ್ತಿನಲ್ಲಿ ನಡೆಯುವ ಪ್ರತಿಭಟನೆಗಳನ್ನು ತಡೆಯಲು ಕೇಂದ್ರ ಕೈಗಾರಿಕಾ ಭದ್ರತಾ ಪಡೆ (CISF) ಸಿಬ್ಬಂದಿಯನ್ನು ಕರೆಸಿಕೊಳ್ಳುತ್ತಿರುವುದು ಗಂಭೀರವಾದ ಬೆಳವಣಿಗೆಯಾಗಿದೆ. ಇದು ಪ್ರಜಾಪ್ರಭುತ್ವದ ಮೇಲೆ ನೇರವಾದ ದಾಳಿ ಎಂದು ಕಾಂಗ್ರೆಸ್ ಆರೋಪಿಸಿದ್ದರೆ, ಸಂಸದರ ಆಕ್ರಮಣಕಾರಿ ವರ್ತನೆಯಿಂದಾಗಿ ಭದ್ರತೆಯ ದೃಷ್ಟಿಯಿಂದ ಈ ಕ್ರಮ ಅನಿವಾರ್ಯವಾಗಿತ್ತು ಎಂದು ಕೇಂದ್ರ ಸರ್ಕಾರ ಸಮರ್ಥಿಸಿಕೊಂಡಿದೆ.

ಖರ್ಗೆಯವರ ಆಕ್ಷೇಪ ಮತ್ತು ಪತ್ರದ ಸಾರಾಂಶ

ರಾಜ್ಯಸಭೆಯಲ್ಲಿ ವಿರೋಧ ಪಕ್ಷದ ನಾಯಕ ಮಲ್ಲಿಕಾರ್ಜುನ ಖರ್ಗೆ, ಈ ವಿಷಯಕ್ಕೆ ಸಂಬಂಧಿಸಿದಂತೆ ರಾಜ್ಯಸಭೆ ಉಪ ಸಭಾಪತಿ ಹರಿವಂಶ್ ಅವರಿಗೆ ಪತ್ರ ಬರೆದಿದ್ದಾರೆ. ಸಾರ್ವಜನಿಕ ಹಿತಾಸಕ್ತಿಯ ವಿಷಯಗಳ ಕುರಿತು ಸಂಸದರು ದನಿ ಎತ್ತಿದಾಗ ಭದ್ರತಾ ಸಿಬ್ಬಂದಿಯನ್ನು ಕರೆಸುವುದು ಅಕ್ಷಮ್ಯ ಎಂದು ಅವರು ತಮ್ಮ ಪತ್ರದಲ್ಲಿ ಉಲ್ಲೇಖಿಸಿದ್ದಾರೆ. "ಕಳೆದ ಎರಡು ದಿನಗಳಿಂದ ರಾಜ್ಯಸಭೆಯಲ್ಲಿ ಪ್ರತಿಭಟನೆ ನಡೆಯುತ್ತಿದ್ದಾಗ ಸಿಐಎಸ್‌ಎಫ್ ಸಿಬ್ಬಂದಿ ಇದ್ದದ್ದು ಆಘಾತಕಾರಿ. ಸಂಸದರ ಹಕ್ಕುಗಳನ್ನು ಮೊಟಕುಗೊಳಿಸುವ ಇಂತಹ ಕ್ರಮಗಳು ಭವಿಷ್ಯದಲ್ಲಿ ಪುನರಾವರ್ತನೆಯಾಗದಂತೆ ತಡೆಯಬೇಕು," ಎಂದು ಖರ್ಗೆ ಆಗ್ರಹಿಸಿದ್ದಾರೆ.

## ಧರ್ಮಸ್ಥಳ ಪ್ರಕರಣದ ಸುದ್ದಿ ಪ್ರಸಾರಕ್ಕೆ ಹಸಿರು ನಿಶಾನೆ

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು
ಧರ್ಮಸ್ಥಳದಲ್ಲಿ ನೂರಾರು ಶವಗಳನ್ನು ಹೂಳಲಾಗಿದೆ ಎಂಬ ಗಂಭೀರ ಆರೋಪಕ್ಕೆ ಸಂಬಂಧಿಸಿದಂತೆ ಮಾಧ್ಯಮಗಳಲ್ಲಿ ಸುದ್ದಿ ಪ್ರಸಾರ ಮಾಡುವುದನ್ನು ತಡೆಹಿಡಿಯುವ ವಿಚಾರಣಾ ನ್ಯಾಯಾಲಯದ ಆದೇಶವನ್ನು ಕರ್ನಾಟಕ ಹೈಕೋರ್ಟ್ ರದ್ದುಪಡಿಸಿದೆ. ಈ ಮಹತ್ವದ ನಿರ್ಧಾರದ ಮೂಲಕ, ಪ್ರಕರಣಕ್ಕೆ ಸಂಬಂಧಿಸಿದಂತೆ ಮುಕ್ತವಾಗಿ ವರದಿ ಮಾಡಲು ಮಾಧ್ಯಮಗಳಿಗೆ ಅವಕಾಶ ಕಲ್ಪಿಸಲಾಗಿದೆ.

ಡಿ. ಹರ್ಷೇಂದ್ರ ಕುಮಾರ್ ಅವರ ವಿರುದ್ಧ ಯಾವುದೇ ಸುದ್ದಿ ಪ್ರಕಟಿಸದಂತೆ ಮಾಧ್ಯಮಗಳನ್ನು ನಿರ್ಬಂಧಿಸಿ ಬೆಂಗಳೂರಿನ ಹೆಚ್ಚುವರಿ ನಗರ ಸಿವಿಲ್ ಮತ್ತು ಸೆಷನ್ಸ್ ನ್ಯಾಯಾಲಯವು ಜುಲೈ 8, 2025 ರಂದು ನೀಡಿದ್ದ ಏಕಪಕ್ಷೀಯ ಪ್ರತಿಬಂಧಕ ಆದೇಶವನ್ನು ನ್ಯಾಯಮೂರ್ತಿ ಎಂ. ನಾಗಪ್ರಸನ್ನ ಅವರಿದ್ದ ಏಕಸದಸ್ಯ ಪೀಠವು ವಜಾಗೊಳಿಸಿದೆ. ಈ ಆದೇಶವು ಪತ್ರಿಕಾ ಸ್ವಾತಂತ್ರ್ಯ ಮತ್ತು ಸಾರ್ವಜನಿಕ ಹಿತಾಸಕ್ತಿಯ ದೃಷ್ಟಿಯಿಂದ ಮಹತ್ವ ಪಡೆದುಕೊಂಡಿದೆ.

# ಯುವ ಕಾಂಗ್ರೆಸ್ ಮುಖಂಡನ ಶವ ಪತ್ತೆ!

■ವಿಜಯಸಾಕ್ಷಿ ಸುದ್ದಿ, ಹಾವೇರಿ
ಹಾವೇರಿ ತಾಲೂಕಿನ ವರದಾ ನದಿಯಲ್ಲಿ ಬಿದ್ದು ನಾಪತ್ತೆಯಾಗಿದ್ದ ಯುವ ಕಾಂಗ್ರೆಸ್ ಮುಖಂಡ ಮನೋಜ್ ಪ್ರಕಾಶ ಉಡಗಣಿ (28) ಶವ ಶುಕ್ರವಾರ ಪತ್ತೆಯಾಗಿದೆ. ಮನೋಜ್ ಅವರನ್ನು ಹತ್ಯೆ ಮಾಡಿರುವ ಶಂಕೆ ವ್ಯಕ್ತವಾಗಿದ್ದು ಪೊಲೀಸರು ಮೂವರು ಆರೋಪಿಗಳನ್ನು ವಶಕ್ಕೆ ಪಡೆದು ವಿಚಾರಣೆ ನಡೆಸಿದ್ದಾರೆ.

ಹಾನಗಲ್ ತಾಲೂಕು ಬೊಮ್ಮನಳ್ಳಿಯ ಮನೋಜ್ ಅವರದ್ದು ಜುಲೈ 25 ರಂದು ಜನ್ಮ ದಿನವಾಗಿತ್ತು. ಅದೇ ದಿನ ಮನೋಜ್ ಮಧ್ಯಾಹ್ನ ಊಟಕ್ಕೆ ದಾಬಾಕ್ಕೆ ಹೋಗುವುದಾಗಿ ಮನೆಯಲ್ಲಿ ತಿಳಿಸಿ ಹೋದವರು ನಾಪತ್ತೆಯಾಗಿದ್ದರು. ಶುಕ್ರವಾರ ಮನೋಜ್ ಅವರ ಶವ ಸವಣೂರು ತಾಲೂಕಿನ ಮೆಳ್ಳಾಗಟ್ಟಿ ಬಳಿ ಪತ್ತೆಯಾಗಿದೆ.



ನನ್ನ ಮಗನನ್ನು ಹಾವೇರಿಯ ಶಿವರಾಜ ಜಾಲವಡಗಿ ಮತ್ತಿತರರು ಸೇರಿ ಕೊಲೆ ಮಾಡಿದ್ದಾರೆ ಎಂದು ಮನೋಜ್ ಅವರ ತಂದೆ ಪ್ರಕಾಶ ಉಡಗಣಿ ಹಾನಗಲ್ ಠಾಣೆಗೆ ದೂರು ನೀಡಿದ್ದಾರೆ. ದೂರು ಆಧರಿಸಿ ಶಿವರಾಜ್ ಸೇರಿದಂತೆ ಮೂವರನ್ನು ಪೊಲೀಸರು ವಶಕ್ಕೆ ಪಡೆದಿದ್ದಾರೆ.

5 ವರ್ಷದ ಹಿಂದೆ ಮನೋಜ್ ಪ್ರೀತಿಸುತ್ತಿದ್ದ ಯುವತಿಯೊಬ್ಬಳು ಶಿವರಾಜ್‌ನನ್ನು ವಿವಾಹವಾಗಿದ್ದಾಳೆ. ಮದುವೆಯ ಬಳಿಕವೂ ಯುವತಿಗೆ ಮನೋಜ್ ಮೆಸೇಜ್ ಮಾಡುತ್ತಿದ್ದರು. ಈ ಕಾರಣಕ್ಕೆ ಯುವತಿಯ ಪತಿ ಆಕ್ರೋಶಗೊಂಡು ಕೊಲೆ ಮಾಡುವುದಾಗಿ ಬೆದರಿಕೆ ಹಾಕುತ್ತ ಇದ್ದ. ಜುಲೈ 25 ರಂದು ಯುವತಿಯ ಪತಿ ಶಿವರಾಜ ಇತರ ಆರೋಪಿಗಳೊಂದಿಗೆ ಸೇರಿ ಮನೋಜ್‌ನನ್ನು ಅಪಹರಿಸಿದ್ದಾರೆ. ಬಳಿಕ ವರದಾ ನದಿಗೆ ದೂಡಿ ಹತ್ಯೆ ಮಾಡಿದ್ದಾರೆ ಎಂದು ಪ್ರಕಾಶ ಅವರು ನೀಡಿರುವ ದೂರಿನಲ್ಲಿ ಉಲ್ಲೇಖಿಸಲಾಗಿದೆ.

## ಮಾಲೆಗಾಂವ್ ಸ್ಫೋಟ ಪ್ರಕರಣ; ಸತ್ಯಕ್ಕೆ ಸಂದ ಜಯ

■ವಿಜಯಸಾಕ್ಷಿ ಸುದ್ದಿ, ನವದೆಹಲಿ
ಮಾಲೆಗಾಂವ್ ಸ್ಫೋಟ ಪ್ರಕರಣಕ್ಕೆ ಸಂಬಂಧಿಸಿದಂತೆ ಎನ್ ಐಎ ಕೋರ್ಟ್ ಎಲ್ಲ ಆರೋಪಿಗಳನ್ನು ನಿರಪರಾಧಿಗಳೆಂದು ಆದೇಶ ನೀಡಿರುವುದು ಸತ್ಯಕ್ಕೆ ಸಂದ ಜಯ ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ ಬೊಮ್ಮಾಯಿ ಅಭಿಪ್ರಾಯ ಪಟ್ಟಿದ್ದಾರೆ. ಈ ಕುರಿತು ಸುದ್ದಿ ಸಂಸ್ಥೆಗೆ ಪ್ರತಿಕ್ರಿಯೆ ನೀಡಿರುವ ಅವರು, ಎನ್ ಐಎ ಕೋರ್ಟ್ ನೀಡಿರುವ ತೀರ್ಪು ಕೇಸರಿ ಭಯೋತ್ಪಾದನೆ ಎಂದು ಬಿಂಬಿಸಲು ಕಾಂಗ್ರೆಸ್ ನಡೆಸಿದ್ದ ಪಿತೂರಿ ಹಾಗೂ ಕೆಟ್ಟ ರಾಜಕೀಯನ್ನು ಬಯಲು ಮಾಡಿದೆ.

# ಸಾರ್ವಜನಿಕರ ಗಮನಕ್ಕೆ

■ವಿಜಯಸಾಕ್ಷಿ ಸುದ್ದಿ, ಗದಗ
2025-26ನೇ ಸಾಲಿನ ಮುಂಗಾರು ಹಂಗಾಮಿಗೆ ಗದಗ ಜಿಲ್ಲೆಗೆ ಜುಲೈ 2025 ಅಂತ್ಯಕ್ಕೆ 17778 ಮೆ.ಟನ್ ಯೂರಿಯಾ ರಸಗೊಬ್ಬರದ ಬೇಡಿಕೆ ಇದ್ದು, ಇಲ್ಲಿಯವರೆಗೆ 21647 ಮೆ.ಟನ್ ಯೂರಿಯಾ ರಸಗೊಬ್ಬರವನ್ನು ಜಿಲ್ಲೆಗೆ ಪೂರೈಸಲಾಗಿದೆ.

ಪ್ರಸ್ತುತ 1321 ಮೆ.ಟನ್ ಯೂರಿಯಾ ರಸಗೊಬ್ಬರವು ಜಿಲ್ಲೆಯ ವಿವಿಧ ರಸಗೊಬ್ಬರ ಮಾರಾಟ ಮಳಿಗೆಗಳಲ್ಲಿ ದಾಸ್ತಾನು ಇದೆ. ದಿನಾಂಕ 01-08-2025ರಂದು ಕೋರಮಂಡಲ್ ಸಂಸ್ಥೆಯಿಂದ 200 ಮೆ.ಟನ್. ಹಾಗೂ 02-08-2025 ರಂದು ಸ್ಪಿಕ್ ಸಂಸ್ಥೆಯ 300 ಮೆ.ಟನ್ ಹೀಗೆ ಒಟ್ಟು 500 ಮೆ.ಟನ್ ಯೂರಿಯಾ ರಸಗೊಬ್ಬರ ಪೂರೈಕೆಯಾಗಲಿದೆ.

ರಸಗೊಬ್ಬರಗಳನ್ನು ಪಾಯಿಂಟ್ ಆಫ್ ಸೇಲ್ (POS) ಮೂಲಕವೇ ಮಾರಾಟ ಮಾಡವುದು, ರೈತರಿಗೆ ಬಿಲ್ಲುಗಳನ್ನು ನೀಡುವುದು,

ನಿಗದಿತ ದರಗಳಲ್ಲಿ ಮಾರಾಟ ಮಾಡುವುದು ಕಡ್ಡಾಯವಾಗಿದೆ.

ಹೆಚ್ಚಿನ ದರದಲ್ಲಿ ಮಾರಾಟ ಮಾಡುವುದು, ಪಾಯಿಂಟ್ ಆಫ್ ಸೇಲ್‌ನಲ್ಲಿ (POS) ಬಾಕಿ ಇರುವುದು ಮತ್ತು ರೈತರಿಗೆ ಬಿಲ್ ನೀಡದಿರುವ ಬಗ್ಗೆ ರೈತ-ರಿಂದ ದೂರುಗಳು ಬಂದಲ್ಲಿ ಅಂತಹ ರಸಗೊಬ್ಬರ ಮಾರಾಟಗಾರರ ವಿರುದ್ಧ Fertilizer Control Order (FCO) 1985 ರನ್ವಯ ಕಾನೂನು ಕ್ರಮ ಜರುಗಿಸಲಾಗುವುದೆಂದು ಜಂಟಿ ಕೃಷಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.


ಕರ್ನಾಟಕ ಸರಕಾರ (ಜಿಲ್ಲಾ ಪಂಚಾಯತ್, ಗದಗ)
**ಕಾರ್ಯನಿರ್ವಾಹಕ ಇಂಜಿನೀಯರ,**
**ಪಂಚಾಯತ್ ರಾಜ್ ಇಂಜಿನೀಯರಿಂಗ್ ವಿಭಾಗ, ಗದಗ.**
ನಂ:ಪಂ.ರಾಜ್.ಇಂ.ವಿ/ಗದಗ/ಪಿಬಿ.3/ಟೆಂಡರ/2025-26/1488
ದಿನಾಂಕ : 31-07-2025

**ಕೆಪಿಪಿ ಪೋರ್ಟಲ್ ಟೆಂಡರ ಪ್ರಕಟಣೆ**
**Standard Bid Document KW-1, 2 & KG-1**

ಕರ್ನಾಟಕ ಸಾರ್ವಜನಿಕ ಪಾರದರ್ಶಕತೆ ಆಕ್ಟ್-2000 ನಿಯಮದಂತೆ Standard Bid Document KW-1, 2 & KG-1 ರ ನಿಯಮಗಳನ್ವಯ ಅರ್ಹ ಗುತ್ತೇದಾರರಿಂದ ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳ ಪೋರ್ಟಲ್ ಮುಖಾಂತರ 11 ಕಾಮಗಾರಿಗಳ ಟೆಂಡರನ್ನು ಆಹ್ವಾನಿಸಲಾಗಿದೆ. ಲೆಕ್ಕ ಶೀರ್ಷಿಕೆ : 2024-25 ನೇ ಸಾಲಿನ ಕೇಂದ್ರ ಯೋಜನೆ ಅಡಿಯಲ್ಲಿ ಪಿ.ಎ.ಬಿ ವಾರ್ಷಿಕ ಕ್ರೀಯಾ ಯೋಜನೆ (ಎ.ಡಬ್ಲ್ಯೂ.ಬಿ&ಬಿ) ಮೇಜರ ದುರಸ್ಥಿ, 2025-26 ನೇ ಸಾಲಿನ MGNREGA ಒಗ್ಗೂಡುವಿಕೆ ಯೋಜನೆ, 2024-25 ನೇ ಸಾಲಿನ ಬಯಲು ಸೀಮೆ ಪ್ರದೇಶಾಭಿವೃದ್ಧಿ ಯೋಜನೆ, 2023-24 ನೇ ಸಾಲಿನ ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ಯೋಜನೆ, 2025-26 ನೇ ಸಾಲಿನ ಜಿಲ್ಲಾ ಪಂಚಾಯತಗಳ ವಾರ್ಷಿಕ (ಲಿಂಕ್ ಡಾಕೂಮೆಂಟ್) ಆರೋಗ್ಯ ಇಲಾಖೆ ಕಟ್ಟಡಗಳ ನಿರ್ವಹಣೆ ಕ್ರೀಯಾ ಯೋಜನೆ, 2024-25 ನೇ ಸಾಲಿನ ಮಳೆ ಪರಿಹಾರ ಕಾರ್ಯಕ್ರಮದ 5054 ಯೋಜನೆಯಡಿ, ಟೆಂಡರನ್ನು ಆಹ್ವಾನಿಸಲಾಗಿದೆ. ಪಿ.ಡಬ್ಲ್ಯು.ಡಿ. ಇಲಾಖೆಯಲ್ಲಿ ನೊಂದಾಯಿತ ಅರ್ಹ ಗುತ್ತಿಗೆದಾರರು ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳ ಪೋರ್ಟಲ್, (https://kppp.karnataka.gov.in) ಮುಖಾಂತರ ಭಾಗವಹಿಸಬಹುದು. ಕಾಮಗಾರಿಗಳ ವರ್ಕ ಇಂಡೆಂಟ್ ಸಂಖ್ಯೆ ಈ ಕೆಳಗಿನಂತೆ ಇರುತ್ತವೆ.

**Indent Nos** : 1) WORK_INDENT : 17683, 17427, 17699, 17688, 17542, 17538, 17671, 10602, 17652, 17208, 17653

ಟೆಂಡರಿಗಿಟ್ಟ ಕನಿಷ್ಠ ಮೊತ್ತ ರೂ. **2.11** ಲಕ್ಷ ಮತ್ತು ಗರಿಷ್ಠ ಮೊತ್ತ ರೂ. **21.00** ಲಕ್ಷಗಳು ಟೆಂಡರ ಅರ್ಜಿಯ ಬೆಲೆ ಹಾಗೂ ಇ.ಎಂ.ಡಿ ಮೊತ್ತದ ವಿವರ:- ಅರ್ಜಿ ಬೆಲೆ ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳ ಪೋರ್ಟಲ್ ಇ.ಎಂ.ಡಿ. ಸಂಬಂಧಪಟ್ಟ ವರ್ಕ ಇಂಡೆಂಟ್‌ನಲ್ಲಿ ನೋಡಬಹುದಾಗಿದೆ.

ಇ-ಪ್ರೋಕ್ಯೂರಮೆಂಟ ಮುಖಾಂತರ ಅರ್ಜಿ ಹಾಗೂ ಶೆಡ್ಯೂಲ್-ಬಿ ಯನ್ನು ವೆಬ್‌ಸೈಟಿನಲ್ಲಿ ಭರ್ತಿ ಮಾಡಿ ಸಲ್ಲಿಸುವ ದಿನಾಂಕ : **01-08-2025** ರಿಂದ **16-08-2025** ರಂದು 16.00 ಗಂಟೆಯವರೆಗೆ. ಟೆಂಡರ ತೆರೆಯುವ ದಿನಾಂಕ : **18-08-2025** ರಂದು 16.30 ಗಂಟೆಗೆ ತೆರೆಯಲಾಗುವುದು. ಟೆಂಡರನ್ನು ಅನಾವರಣಗೊಳಿಸಿದ ದಿನಾಂಕದಿಂದ ಭಾಗವಹಿಸಿದ ಗುತ್ತಿಗೆದಾರರಲ್ಲಿ ಆರ್ಥಿಕ ಬಿಡ್‌ದಲ್ಲಿ ಅರ್ಹ ಗುತ್ತಿಗೆದಾರರು ಈ ಕಾರ್ಯಾಲಯಕ್ಕೆ ಹಾಜರಾಗಿ ವ್ಯತ್ಯಾಸದ ಮೊತ್ತ ಹಾಗೂ ಪಿ.ಎಸ್.ಡಿ. ಮೊತ್ತವನ್ನು ಎಫ್.ಡಿ.ಆರ್ ರೂಪದಲ್ಲಿ 20 ದಿನಗಳ ಒಳಗಾಗಿ (ಷರತ್ತು ಕ್ರ.ಸಂ :13 ರಂತೆ) ಭರಣಾ ಮಾಡಬೇಕು. ಇ-ಪದ್ಧತಿ ಇರುವುದರಿಂದ ಕಾಗದ ರಹಿತವಾಗಿದ್ದು ಯಾವುದೇ ಪತ್ರ ವ್ಯವಹಾರಕ್ಕೆ ಅವಕಾಶ ಇರುವುದಿಲ್ಲ. ಹೆಚ್ಚಿನ ಮಾಹಿತಿಯನ್ನು ಈ ಕಚೇರಿಯ ಕೆಲಸದ ವೇಳೆಯಲ್ಲಿ ಪಡೆಯಬಹುದು.

**ಸಹಿ/- ಕಾರ್ಯನಿರ್ವಾಹಕ ಇಂಜಿನೀಯರರು,**
**ಪಂ.ರಾಜ್. ಇಂಜಿನೀಯರಿಂಗ್ ವಿಭಾಗ,**
**ಗದಗ**
ವಾಸಾಸಂಇ/ಗದಗ/ಕೆಎಸ್‌ಎಂಸಿಎ/213/2025-26


ರೈತರ ಜಮೀನುಗಳಿಗೆ ಧಾರವಾಡ ಕೃಷಿ ವಿಶ್ವವಿದ್ಯಾಲಯದ ವಿಜ್ಞಾನಿಗಳ ಭೇಟಿ

# ಹೆಸರು ಬೆಳೆಯ ಕೀಟ ಬಾಧೆ ಹತೋಟಿಗೆ ಸಲಹೆ



■ವಿಜಯಸಾಕ್ಷಿ ಸುದ್ದಿ, ಗದಗ
ತಾಲೂಕಿನಾದ್ಯಂತ ಹೆಸರು ಬೆಳೆಗೆ ಕೀಟ ಬಾಧೆ, ಕಾಯಿ ಗೊಂಚಲು ಉದುರುವುದು ಹಾಗೂ ಹಳದಿ ನಂಜಾಣು ರೋಗದಿಂದ ರೈತರು ಚಿಂತಾಕ್ರಾಂತರಾಗಿದ್ದಾರೆ. ಈ ಹಿನ್ನೆಲೆಯಲ್ಲಿ ಧಾರವಾಡ ಕೃಷಿ ವಿಶ್ವವಿದ್ಯಾಲಯದ ವಿಜ್ಞಾನಿಗಳು ಹಾನಿಗೊಳಗಾದ ಹರ್ಲಾಪೂರ, ಲಕ್ಕುಂಡಿ, ತಿಮ್ಮಾಪೂರ ಗ್ರಾಮಗಳ ರೈತರ ಜಮೀನುಗಳಿಗೆ ಭೇಟಿ ನೀಡಿ ರೋಗಗಳ ಬಗ್ಗೆ ಪರಿಶೀಲಿಸಿ ರೈತರಿಗೆ ಮಾಹಿತಿ ನೀಡಿದರು.

ಕೀಟಶಾಸ್ತ್ರ ವಿಜ್ಞಾನಿ ಎಸ್.ವಿ. ಹೂಗಾರ ಮಾತನಾಡಿ, ಯಾವುದೇ ಕೀಟಗಳಿಂದ ಕಾಯಿಗಳು ನೆಲಕ್ಕೆ ಬಿದ್ದಿಲ್ಲ. ಬದಲಾಗಿ, ಅಡವಿಯಲ್ಲಿ ಇರುವ ಮೊಲಗಳ ಮರಿಗಳು ಈ ಕಾಯಿಗಳ ಗೊಂಚಲನ್ನು ಕಡಿದು ಹಾಕಿದಂತಿದೆ. ನೆಲಕ್ಕೆ ಬಿದ್ದ ಹೆಸರು ಕಾಯಿಗಳನ್ನು ಪ್ರಯೋಗಾಲಯಕ್ಕೆ ತೆಗೆದುಕೊಂಡು ಹೋಗಿ ಪರೀಕ್ಷೆ ನಡೆಸುತ್ತೇವೆ ಎಂದರು.

ಬೇಸಾಯ ಶಾಸ್ತ್ರ ವಿಜ್ಞಾನಿ ಪ್ರಸನ್ನ ಕುಮಾರ್ ಬಿ.ಎಚ್ ಮಾತನಾಡಿ, ತಾಲೂಕಿನ ಬಹುತೇಕ ಗ್ರಾಮಗಳಲ್ಲಿ ಮಳೆಯಾಗಿದ್ದು, ಉತ್ತಮ ಬೆಳೆ ಬಂದಿದೆ. ಆದರೆ ಈಗ ಹಳದಿ ನಂಜಾಣು ರೋಗ ಸೇರಿದಂತೆ ಅನೇಕ ಕೀಟ ಹಾಗೂ ರೋಗಬಾಧೆ ಅಲ್ಲಲ್ಲಿ ಕಂಡುಬರುತ್ತಿದೆ. ತಾಲೂಕಿನ ಕೆಲ ಗ್ರಾಮಗಳಲ್ಲಿ ಸತತ ಮಳೆ ಸುರಿಯುತ್ತಿರುವದರಿಂದ ತಂಪು ವಾತಾವರಣ ಹೆಚ್ಚಾಗಿ ಹೆಸರು ಬೆಳೆಗಳಿಗೆ ಹಳದಿ ನಂಜಾಣು ರೋಗ ಕಂಡುಬಂದಿದ್ದು, ರೈತರು ತಮ್ಮ ಜಮೀನಿನಲ್ಲಿ ಹಳದಿ ಬಣ್ಣದ ಬೆಳೆಗಳಿದ್ದರೆ ಅದನ್ನು ಕಿತ್ತು ಭೂಮಿಯಲ್ಲಿ ಹೂಳಬೇಕು. ಇದು ಅಂಟು ರೋಗವಾಗಿರುವದರಿಂದ ಗಿಡದಿಂದ ಗಿಡಕ್ಕೆ ಹರಡುತ್ತಾ ಹೋಗುತ್ತದೆ ಎಂದು ವಿವರಿಸಿದರು.

ಎಲೆ ತಿನ್ನುವ ಕೀಟ ಬಾಧೆಗಳಿಗಾಗಿ ಡೈಯೊಮಿಥೋಯೇಟ್ 1.7 ಟಿಟ ಮೊನೊಕ್ರೊಟೊಪಾಸ್ 1ಟಿಟ ಪ್ರತಿ ಲೀಟರ್ ನೀರಿಗೆ ಬೆರೆಸಿ ಸಿಂಪಡಿಸಬೇಕು. ಬೇವಿನ ಎಣ್ಣೆಯನ್ನು ಕೀಟಗಳ ನಿಯಂತ್ರಣಕ್ಕಾಗಿ ಸಿಂಪಡಿಸಿದರೆ ಎಲೆ ತಿನ್ನುವ ಕೀಟ ಬಾಧೆ ನಿಯಂತ್ರಣವಾಗುತ್ತದೆ ಎಂದು ಸೂಚಿಸಿದರು.

ಈ ಸಂದರ್ಭದಲ್ಲಿ ರೈತ ಸಂಪರ್ಕ ಕೇಂದ್ರದ ಕೃಷಿ ಅಧಿಕಾರಿ ಬಸವರಾಜೇಶ್ವರಿ ಸಜ್ಜನರ, ತಳಿ ಶಾಸ್ತ್ರ ವಿಜ್ಞಾನಿ ಎಂ.ಡಿ. ಪಾಟೀಲ್, ಆತ್ಮ ಯೋಜನೆ ಸಹಾಯಕರಾದ ಸುಶ್ಮಿತಾ ಹುಚ್ಚೀರಪ್ಪ ಜೋಗಿನ, ವೆಂಕಟೇಶ ಸತ್ಯಪ್ಪನವರ, ಕಪ್ಪತ್ತಪ್ಪ ಸೋಂಪೂರ, ಹನುಮಪ್ಪ ತಳವಾರ, ಉದಯ ಗಂಗರಾತ್ರಿ, ಶರಣಪ್ಪ ಜೋಗಿನ ಮುಂತಾದವರಿದ್ದರು.

> ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ವಿ.ಆರ್. ನಾರಾಯಣರೆಡ್ಡಿ ಬಣದ ಗದಗ ಜಿಲ್ಲಾ ರೈತ ಸಂಘದ ಜಿಲ್ಲಾಧ್ಯಕ್ಷ ಯಲ್ಲಪ್ಪ ಎಚ್.ಬಾಬರಿ ಮಾತನಾಡಿ, ಪ್ರಸ್ತುತ ವರ್ಷ ಗದಗ-ಬೆಟಗೇರಿ ಹೋಬಳಿಯಲ್ಲಿ ಮುಂಗಾರು ಬೆಳೆಗಳಾದ ಹೆಸರು, ಶೇಂಗಾ ಬೆಳೆಗಳಿಗೆ ಹಳದಿ ನಂಜಾಣು ರೋಗದ ಲಕ್ಷಣಗಳು ಕಂಡುಬರುತ್ತಿವೆ.
> ಸರ್ಕಾರ ಮಧ್ಯ ಪ್ರವೇಶಿಸಿ ಬೆಳೆ ಹಾನಿಯ ಬಗ್ಗೆ ಅಧಿಕಾರಿಗಳ ಮೂಲಕ ವರದಿ ಪಡೆದು ರೈತರಿಗೆ ಸೂಕ್ತ ಬೆಳೆಹಾನಿ ಪರಿಹಾರ ನೀಡಬೇಕು ಎಂದು ಹೇಳಿದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka